ಸಂಪುಟ : 10 ಸಂಚಿಕೆ: 201 ಪುಟ : 4+2 ಬೆಲೆ: 3.00 ಗುರುವಾರ ಸೆಪ್ಟೆಂಬರ್ 18 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 201 Pages : 4+2 Price : 3.00 Thursday September 18 2025 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಕರ್ನಾಟಕ ರಾಜ್ಯ ಕೌಶಲ್ಯ ಒಲಿಂಪಿಕ್ಸ್ ಸ್ಪರ್ಧೆ

■ವಿಜಯಸಾಕ್ಷಿ ಸುದ್ದಿ, ಗದಗ

2026ನೇ ಸಾಲಿನ ವಿಶ್ವ ಕೌಶಲ್ಯ ಸ್ಪರ್ಧೆಯು ಚೀನಾದ ಶಾಂಘೈನಲ್ಲಿ ನಡೆಯಲಿದೆ. ಕರ್ನಾಟಕದ ಯುವ ಜನತೆಯ ಜ್ಞಾನಾರ್ಜನೆಗೆ ಸೂಕ್ತ ವೇದಿಕೆ ಕಲ್ಪಿಸಲು ಹಾಗೂ ಮಾದರಿ ಕೌಶಲ್ಯ ಭರಿತ ರಾಜ್ಯವನ್ನಾಗಿಸಲು 2025-26ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಕೌಶಲ್ಯ ಒಲಿಂಪಿಕ್ಸ್ (India skills Karnataka -2025 ) ಸ್ಪರ್ಧಾ ಕಾರ್ಯಕ್ರಮವನ್ನು ಜಿಲ್ಲಾ ವಲಯ ಹಾಗೂ ರಾಜ್ಯಮಟ್ಟದಲ್ಲಿ ಕೈಗೊಳ್ಳಲು ಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದ್ದಾರೆ.

ಗದಗ ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ನೋಂದಾಯಿಸುವ ಮೂಲಕ ಯಶಸ್ವಿಗೊಳಿಸಬೇಕಿದ್ದು, ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ, ಕೊಠಡಿ ಸಂಖ್ಯೆ 106, 1ನೇ ಮಹಡಿ ಗದಗ-582103, ದೂರವಾಣಿ ಸಂಖ್ಯೆ 08372-235002, ಅಥವಾ ಪ್ರಾಣೇಶ ಉಪಪ್ರಧಾನ ವ್ಯವಸ್ಥಾಪಕರು, ಕೆ.ಎಸ್.ಡಿ.ಸಿ. ಬೆಂಗಳೂರು, ಮೊ.ನಂ. 9686409096, ಇಮೇಲ್ ವಿಳಾಸ : indiaskillar@gmail.com ಅವರನ್ನು ಸಂಪರ್ಕಿಸಬಹುದಾಗಿದೆ.

ವಿಶ್ವ ಕೌಶಲ್ಯ ಸ್ಪರ್ಧೆ ಪ್ರತಿ ಎರಡು ವರ್ಷಕ್ಕೊಮ್ಮೆ ನಡೆಯುವ ವಿಶ್ವದ ಅತಿ ದೊಡ್ಡ ವೃತ್ತಿಪರ ಕೌಶಲ್ಯ ಸ್ಪರ್ಧೆಯಾಗಿದೆ. 75ಕ್ಕೂ ಹೆಚ್ಚು ದೇಶಗಳಿಂದ ಸಾವಿರಕ್ಕೂ ಅಧಿಕ ಕೌಶಲ್ಯಯುತ ಯುವಜನತೆ (16-25 ವರ್ಷ ವಯಸ್ಸಿನವರು) 63 ವಿವಿಧ ಕೌಶಲ್ಯ ವಿಭಾಗಗಳಲ್ಲಿ ಭಾಗವಹಿಸಿ ತಮ್ಮ ಕೌಶಲ್ಯ ಶ್ರೇಷ್ಠತೆಯನ್ನು ಜಾಗತಿಕ ವೇದಿಕೆಯಲ್ಲಿ ಪ್ರದರ್ಶಿಸುತ್ತಾರೆ.

ವಿಶ್ವ ಕೌಶಲ್ಯ ಸ್ಪರ್ಧೆ 2026 ಚೀನಾದ ಶಾಂಘೈ ನಗರದಲ್ಲಿ ನಡೆಯಲಿದೆ. ಈ ಸ್ಪರ್ಧೆಯ ಭಾಗವಾಗಿ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ (ಕೆಎಸ್‌ಡಿಸಿ) ಕರ್ನಾಟಕ ರಾಜ್ಯ ಒಲಿಂಪಿಕ್ 2025ನ್ನು ಪ್ರಾರಂಭಿಸಿದೆ. ಈ ಸ್ಪರ್ಧೆಯ ವಿಜೇತರಿಗೆ ಉನ್ನತ ಮಟ್ಟದ ತರಬೇತಿ ಮತ್ತು ಆಯ್ಕೆ ಪ್ರಕ್ರಿಯೆ ನಡೆಯಲಿದ್ದು, ಅವರು ಭಾರತವನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರತಿನಿಧಿಸುವ ಅವಕಾಶ ಪಡೆಯಲಿದ್ದಾರೆ. ಹೆಸರು ನೋಂದಾಯಿಸಿಕೊಳ್ಳಲು ಕೊನೆಯ ದಿನ ಸೆಪ್ಟೆಂಬರ್ 30 ಆಗಿದ್ದು, ಇಂಡಿಯಾ ಸ್ಕಿಲ್ 2025ರ ಕುರಿತಾದ ಸಂಪೂರ್ಣ ಮಾಹಿತಿಗಾಗಿ www.skillindiadigital.gov.in ಗೆ ಲಾಗಿನ್ ಮಾಡಬಹುದು. ನೋಂದಣಿ ಮತ್ತು ಭಾಗವಹಿಸುವಿಕೆ ಸಂಪೂರ್ಣ ಉಚಿತವಾಗಿರುತ್ತದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹಿರಿಯ ನಾಗರಿಕರಿಗೆ ಅಗತ್ಯ ಸಾಧನ, ಉಪಕರಣ ವಿತರಣೆ ಕಾರ್ಯಕ್ರಮದಲ್ಲಿ ಸಂಸದ ಬಸವರಾಜ ಬೊಮ್ಮಾಯಿ

# ಸಶಕ್ತ ಭಾರತ ನಿರ್ಮಿಸೋಣ




ಸರ್ಕಾರ ಹಿರಿಯರ ಊರುಗೋಲಾಗಿ ನಿಂತಿದೆ. ನಾನು ಸಿಎಂ ಆಗಿದ್ದಾಗ ಹಿರಿಯ ನಾಗರಿಕರ ಸಂಧ್ಯಾ ಸುರಕ್ಷಾ, ಅಂಗವಿಕಲರ ಪೆನ್ಷನ್ ಹಣದಲ್ಲಿ ಹೆಚ್ಚಳ ಮಾಡಿದ್ದೆ.

ಕ್ಯಾನ್ಸರ್‌ನ ಕಿಮೋಥೆರಪಿ, ಕಿಡ್ನಿ ಡಯಾಲಿಸಿಸ್ ಚಿಕಿತ್ಸೆಯ ನೆರವನ್ನು ಹೆಚ್ಚಳ ಮಾಡಿದ ತೃಪ್ತಿಯಿದೆ. ಪೌರ ಕಾರ್ಮಿಕರನ್ನು ಖಾಯಂಗೊಳಿಸಿದ್ದೇನೆ, ಸುಡುಗಾಡಿನಲ್ಲಿ ಕೆಲಸ ಮಾಡುವವರನ್ನು ಸರ್ಕಾರಿ ನೌಕರರನ್ನಾಗಿ ಮಾಡಿದ್ದೇನೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ಹಿರಿಯರನ್ನು ದೇವರ ಸಮಾನವಾಗಿ ನೋಡಿಕೊಂಡರೆ ಪುಣ್ಯ ಪ್ರಾಪ್ತಿಯಾಗುತ್ತದೆ. ವಯೋವೃದ್ಧರಿಗೆ, ಅಂಗವಿಕಲರಿಗೆ ಸಹಾಯ ಮಾಡಿ ಸಶಕ್ತ ಭಾರತವನ್ನು ನಿರ್ಮಿಸೋಣ ಎಂದು ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ನಗರದ ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ಬುಧವಾರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ವತಿಯಿಂದ ರಾಷ್ಟ್ರೀಯ ವಯೋಶ್ರೀ ಯೋಜನೆ ಅಡಿಯಲ್ಲಿ ಹಿರಿಯ ನಾಗರಿಕರಿಗೆ ಅಗತ್ಯವಾದ ನೆರವಿನ ಸಾಧನ ಹಾಗೂ ಸಹಾಯಕ ಉಪಕರಣ ನೀಡುವ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಹುಟ್ಟು-ಸಾವು ಆಕಸ್ಮಿಕವಾಗಿದೆ. ಬದುಕು ಮಾತ್ರ ನಮ್ಮ ಕೈಯಲ್ಲಿದೆ. ಬದುಕಿನಲ್ಲಿ ಅರ್ಥಪೂರ್ಣವಾಗಿ ಜೀವನ ಸಾಗಿಸಬೇಕು. ಬಡತನವಿರಲಿ, ಸಿರಿತನವಿರಲಿ ಪ್ರತಿಯೊಬ್ಬ ಮನುಷ್ಯನ ಬದುಕು ಸಾರ್ಥಕತೆಯಿಂದ ಕೂಡಿರಬೇಕು. ಇದರಿಂದ ಮನುಷ್ಯ ಶ್ರೇಷ್ಠನಾಗುತ್ತಾನೆ. ಮನುಷ್ಯ ಹುಟ್ಟಿದಾಗ ತಂದೆ-ತಾಯಿ, ಬಂಧು-ಬಳಗದ ಆಶ್ರಯವಿಲ್ಲದೇ ಬೆಳೆಯಲು ಸಾಧ್ಯವಿಲ್ಲ. ಎಲ್ಲ ಸಂಬಂಧಗಳಿಗಿಂತ ತಾಯಿಯ ಸಂಬಂಧ ಶ್ರೇಷ್ಠವಾದದ್ದು. ತಾಯಿ ಗರ್ಭದಿಂದ ಭೂತಾಯಿಯ ಗರ್ಭದವರೆಗೆ ನಮ್ಮ ಸಂಬಂಧ ಇರುತ್ತದೆ. ಇದರ ನಡುವೆ ಒಬ್ಬರನ್ನೊಬ್ಬರನ್ನೂ ಪ್ರೀತಿಸುವ ಬದುಕನ್ನು ಕಟ್ಟಿಕೊಳ್ಳಬೇಕು ಎಂದರು.

ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಪ್ರತಿಯೊಂದು ತಾಲೂಕು ಆಸ್ಪತ್ರೆಯಲ್ಲಿ 60 ವರ್ಷ ಮೇಲ್ಪಟ್ಟವರನ್ನು ಗುರುತಿಸಿ 663 ಸಲಕರಣೆಗಳನ್ನು ವಿತರಿಸಲಾಗುತ್ತಿದೆ. 60 ವರ್ಷ ಆದ ನಂತರ ವಯೋಸಹಜ ಕಾಯಿಲೆಗಳು ಬರುತ್ತವೆ. ಹೀಗಾಗಿ, ಆರೋಗ್ಯದ ಕಡೆ ಹೆಚ್ಚು ಒತ್ತು ನೀಡಬೇಕು. ಹಿರಿಯರು ನಡೆಯುವಾಗ ಎಚ್ಚರಿಕೆ ವಹಿಸಬೇಕು. ಸಲಕರಣೆಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, 660ಕ್ಕೂ ಹೆಚ್ಚು ಫಲಾನುಭವಿಗಳಿಗೆ 64 ಲಕ್ಷ ರೂ ವೆಚ್ಚದಲ್ಲಿ ಕೇಂದ್ರ ಸರ್ಕಾರ ಸಲಕರಣೆ ನೀಡುತ್ತಿರುವುದು ಸಂತಸದ ವಿಷಯ. ಗದಗ ಜಿಲ್ಲೆಯಲ್ಲಿನ ಯಾವುದೇ ಫಲಾನುಭವಿಗಳು ▶▶3ನೇ ಪುಟಕ್ಕೆ

## ನಾಳೆ ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಡಂಬಳ

110 ಕೆ.ವ್ಹಿ ಮುಂಡರಗಿ, ಡಂಬಳ ಮತ್ತು ಶಿಂಗಟಾಲೂರ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ಸೆ. 19ರಂದು ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುವುದರಿಂದ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 6 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

ಸದರಿ ಉಪಕೇಂದ್ರಗಳಿಂದ ಪೂರೈಕೆಯಾಗುವ 110 ಕೆ.ವ್ಹಿ. ವಿಜಯನಗರ ಶುಗರ್ಸ್, ಬೀಡನಾಳ ನೀರಾವರಿ, 33 ಕೆ.ವ್ಹಿ. ನೀರು ಸರಬರಾಜು ಶಿಂಗಟಾಲೂರ, ಕೆ.ಎನ್.ಎನ್.ಎಲ್, 110 ಕೆ.ವ್ಹಿ. ಎನರ್ಕಾನ್ ವಿಂಡ್, 110 ಕೆ.ವ್ಹಿ ಸುಜಲಾನ ವಿಂಡ್, 110 ಕೆ.ವ್ಹಿ ಚರ್ಚಿಹಾಳ, ಅಖಿಲಗ್ಯಾ ಸೋಲಾರ್ ಮತ್ತು ಎಲ್ಲಾ ನಗರ, ಕೈಗಾರಿಕಾ, ನೀರಾವರಿ ಪಂಪ್‌ಸೆಟ್‌ಗಳ ಮಾರ್ಗ, ಕುಡಿಯುವ ನೀರು ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಹೆಸ್ಕಾಂ ಪ್ರಕಟಣೆ ತಿಳಿಸಿದೆ.

### ಮರಾಠಾ ಸಮಾಜದ ರಾಷ್ಟ್ರೀಯ ಮುಖಂಡ ಪಿ.ಜಿ.ಆರ್. ಸಿಂಧ್ಯಾರಿಂದ ಮುಖಂಡರುಗಳ ಸಭೆ

# ನಾವೆಲ್ಲರೂ ಸಂಘಟಿತರಾಗಿ ಮುನ್ನಡೆಯೋಣ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಸರಕಾರದ ಹಿಂದುಳಿದ ವರ್ಗಗಳ ಆಯೋಗ ಸೆ. 22ರಿಂದ ಅ. 7ರವರೆಗೆ ನಡೆಸುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ-2025ರ ಕುರಿತು ಜಾತಿಗಣತಿಗಾಗಿ ಮನೆ-ಮನೆಗೆ ಬರುವ ಗಣತಿದಾರರಿಗೆ ಮರಾಠರು ಅನುಸೂಚಿ ಧರ್ಮದ ಕಾಲಂನಲ್ಲಿ ಹಿಂದೂ ಎಂದು, ಜಾತಿ ಕಾಲಂನಲ್ಲಿ ಮರಾಠಾ ಎಂದು, ಉಪಜಾತಿ ಕಾಲಂನಲ್ಲಿ ಕುಣಬಿ ಎಂದು, ಮಾತೃಭಾಷೆಯ ಕಾಲಂನಲ್ಲಿ ಮರಾಠಿ ಬರೆಸಬೇಕೆಂದು ಮರಾಠಾ ಸಮಾಜದ ರಾಷ್ಟ್ರೀಯ ಮುಖಂಡ ಪಿ.ಜಿ.ಆರ್. ಸಿಂಧ್ಯಾ ಹೇಳಿದರು.

ನಗರದಲ್ಲಿ ಜರುಗಿದ ಮರಾಠಾ ಮುಖಂಡರ ಸಭೆಯಲ್ಲಿ ಅವರು ಮಾತನಾಡಿದರು.

800ರಿಂದ 900 ವರ್ಷಗಳ ಇತಿಹಾಸ ಹೊಂದಿರುವ ಮರಾಠಿಗರು ಮೂಲ ಕನ್ನಡಿಗರಾಗಿದ್ದು, ಅವರ ಮೂಲ ಕಸಬು ಕೃಷಿ (ಕುಣಬಿ) ಆಗಿದೆ. ಮರಾಠಾ ಸಮಾಜಕ್ಕೆ ಗೋಸಾಯಿಗಳು ಗುರುಗಳಾಗಿದ್ದಾರೆ. ಗೋಸಾಯಿ ಮಠವು ಈ ಹಿಂದೆ ಬೆಂಗಳೂರಿನಲ್ಲಿ 2000 ಎಕರೆ ಪ್ರದೇಶ ಹೊಂದಿತ್ತು. ಸೂಕ್ತ ನಾಯಕರು ಇಲ್ಲದೆ ಅದನ್ನು ಕಳೆದುಕೊಳ್ಳಬೇಕಾಯಿತು. ಶ್ರವಣಬೆಳಗೊಳದಲ್ಲಿ ಬಾಹುಬಲಿಯನ್ನು ಕೆತ್ತಿರುವುದು ಮರಾಠಿಗರು. ನಮಗೆ ಸಮರ್ಥರಾದ ನಾಯಕರು ಇಲ್ಲದಿರುವದರಿಂದ ನಾವು ಸಾಮಾಜಿಕವಾಗಿ ಹಿಂದೆ ಉಳಿದಿಲ್ಲ, ಆರ್ಥಿಕವಾಗಿ ಹಿಂದೆ ಉಳಿದಿದ್ದೇವೆ. ಈಗಲಾದರೂ ನಾವೆಲ್ಲರೂ ಸಂಘಟಿತರಾಗಿ ಮುನ್ನಡೆಯಬೇಕಾಗಿದೆ ಎಂದು ಹೇಳಿದರು.




ರಾಜ್ಯದಲ್ಲಿ 50 ಲಕ್ಷಕ್ಕೂ ಹೆಚ್ಚು ಮರಾಠರಿದ್ದು, ಸರಕಾರದ ಹಿಂದಿನ ಸಮೀಕ್ಷೆಯಲ್ಲಿ ಕೇವಲ 16 ಲಕ್ಷ ಮರಾಠಿಗರಿದ್ದಾರೆ ಎಂದು ಗುರುತಿಸಿದ್ದಾರೆ. ಇದರಿಂದ ಎಲ್ಲ ಮರಾಠಾ ಬಾಂಧವರು ಸರಕಾರದಿಂದ ಸಿಗುವ ಸೌಲಭ್ಯಗಳಿಂದ ವಂಚಿತರಾಗಿದ್ದೇವೆ.

ಅದ್ದರಿಂದ ಎಲ್ಲರೂ ಜಾತಿ ಗಣತಿಯಲ್ಲಿ ತಪ್ಪದೇ ಮೇಲ್ಕಂಡ ಒಮ್ಮತದ ಅಭಿಪ್ರಾಯವನ್ನು ಬರೆಸಬೇಕು.

ಈಗಾಗಲೇ ಕೆಕೆಎಂಪಿ ರಾಜ್ಯಾಧ್ಯಕ್ಷ ಸುರೇಶರಾವ್ ಸಾಠೆ ಅವರು ಈ ಕುರಿತು ಕರಪತ್ರಗಳನ್ನು ಹಂಚುವ ಮೂಲಕ ಜಾಗೃತಿ ಮೂಡಿಸುತ್ತಿರುವದು ಸ್ವಾಗತಾರ್ಹ ಎಂದು ಪಿ.ಜಿ.ಆರ್. ಸಿಂಧ್ಯಾ ಹೇಳಿದರು.

ಈ ಸಂದರ್ಭದಲ್ಲಿ ಮರಾಠಾ ವಿದ್ಯಾವರ್ಧಕ ಸಂಘದ ಜಿಲ್ಲಾಧ್ಯಕ್ಷ ಅರುಣಕುಮಾರ ಚವ್ಹಾಣ, ಕಾರ್ಯದರ್ಶಿ ಸುರೇಶ ಬೇಂದ್ರೆ, ಕರ್ನಾಟಕ ಕ್ಷತ್ರಿಯ ಮರಾಠಾ ಪರಿಷತ್‌ನ ಜಿಲ್ಲಾಧ್ಯಕ್ಷ ಡಾ. ರಾಜೀವ ರೋಖಡೆ, ಸಹಕಾರ್ಯದರ್ಶಿ ಎಂ.ಆರ್. ಅರಳಿಕಟ್ಟಿ, ಪ್ರಭು ಬೇಂದ್ರೆ, ವಿನೀತಕುಮಾರ ಜಗತಾಪ, ಮಹೇಶ ಶೆಟವಾಜಿ, ಶಿವಾಜಿ ಗ್ವಾರಿ, ಮಾರುತಿ ಹೆಬ್ಬಳ್ಳಿ, ಶಿವಾಜಿ ಪವನ, ಮಂಜುನಾಥ ಮಾನೆ, ಮಲ್ಲು ದೊಡ್ಡಮನಿ, ಪರಶುರಾಮ ಜಾಧವ, ವೀರಣ್ಣ ಪವಾರ, ಶಂಕರ ಡಂಬಳ, ಸುಭಾಷ ಕದಡಿ, ನಾಗರಾಜ ಮಗದಮ್, ನಾರಾಯಣರಾವ್ ಗಾಯಕವಾಡ, ಶಂಕರ ಓಬಾಜಿ, ದೇವೇಂದ್ರ ದೊಡ್ಡಮನಿ, ನರಸಪ್ಪ ತುಕ್ಕಪ್ಪನವರ, ಬಸವರಾಜ ಹುಬ್ಬಳ್ಳಿ, ಶಂಕರ ನಿಕ್ಕಮ ಸೇರಿದಂತೆ ಮರಾಠಾ ವಿದ್ಯಾವರ್ಧಕ ಸಂಘ, ಕರ್ನಾಟಕ ಕ್ಷತ್ರಿಯ ಮರಾಠಾ ಪರಿಷತ್, ಮಾತೋಶ್ರೀ ರಾಜಮಾತಾ ಜಿಜಾವು ಸ್ವ-ಸಹಾಯ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಗದಗ ರೈಲ್ವೆ ನಿಲ್ದಾಣಕ್ಕೆ ಪುಟ್ಟರಾಜರ ಹೆಸರಿಡಿ




■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ರೈಲ್ವೆ ನಿಲ್ದಾಣಕ್ಕೆ ಗಾನಯೋಗಿ ಪಂ. ಪುಟ್ಟರಾಜ ಕವಿ ಗವಾಯಿಗಳವರ ಹೆಸರನ್ನು ನಾಮಕರಣ ಮಾಡುವಂತೆ ಒತ್ತಾಯಿಸಿ ಸೆಪ್ಟೆಂಬರ್ 19ರಂದು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಕ್ರಾಂತಿ ಸೇನಾ ಸಂಘಟನೆಯ ಜಿಲ್ಲಾಧ್ಯಕ್ಷ ಬಾಬು ಬಾಕಳೆ ತಿಳಿಸಿದರು.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಗದಗ ವೀರೇಶ್ವರ ಪುಣ್ಯಾಶ್ರಮವು ಅಂಧರು, ಅನಾಥರು ಮತ್ತು ಬಡ ಮಕ್ಕಳ ಉನ್ನತಿಗಾಗಿ ಸಮರ್ಪಿತವಾದ ಸಂಸ್ಥೆಯಾಗಿದೆ. ಯಾವುದೇ ಸರ್ಕಾರಿ ಅನುದಾನದ ಸಹಾಯವಿಲ್ಲದೆ ನಡೆಯುತ್ತಿರುವ ಈ ಆಶ್ರಮವು ಸಂಗೀತ ಮತ್ತು ಲಲಿತಕಲೆಗಳಲ್ಲಿ ಸಾವಿರಾರು ಪ್ರತಿಭೆಗಳನ್ನು ಗುರುತಿಸಿ ಸಮಾಜಕ್ಕೆ ಕೊಡುಗೆ ನೀಡಿದೆ ಎಂದರು.

ಸೆ. 19ರಂದು ನಗರದ ಭೂಮರೆಡ್ಡಿ ಸರ್ಕಲ್‌ನಲ್ಲಿರುವ ಶ್ರೀ ಪುಟ್ಟರಾಜರ ಪುತ್ಥಳಿಗೆ ಮಾಲಾರ್ಪಣೆ ಮಾಡುವುದರೊಂದಿಗೆ ಪ್ರತಿಭಟನಾ ಮೆರವಣಿಗೆ ಆರಂಭವಾಗಲಿದೆ. ರೋಟರಿ ಸರ್ಕಲ್, ಗಾಂಧಿ ಸರ್ಕಲ್, ಮಹೇಂದ್ರಕರ ಸರ್ಕಲ್, ಹುಯಿಲಗೋಳ ನಾರಾಯಣರಾವ್ ಸರ್ಕಲ್, ಬಸವೇಶ್ವರ ವೃತ್ತ, ಚೌಡಿ ಕೂಟ ಮತ್ತು ಮುಳಗುಂದ ನಾಕಾ ಮಾರ್ಗವಾಗಿ ಪಾದಯಾತ್ರೆಯಲ್ಲಿ ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ಮನವಿ ಸಲ್ಲಿಸಲಾಗುವುದು ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ವೆಂಕಟೇಶ ಭಜಂತ್ರಿ, ಶಿವಲಿಂಗಯ್ಯ ಶಾಸ್ತ್ರಿ, ಪ್ರವೀಣ ಹಬೀಬ, ರಾಣಿ ಚಂದಾವರಿ, ಬಸಯ್ಯ ನಂದಿಕೋಲಮಠ, ಭೀಮ ಖಾಟಿಗರ, ಕಿರಣ ಪಟ್ಟಣಶೆಟ್ಟಿ, ಶಿವಕುಮಾರ ಕುಂಬಾರ ಮುಂತಾದವರು ಉಪಸ್ಥಿತರಿದ್ದರು.

### ಮಾಜಿ ಸಿಎಂ, ಸಂಸದ ಬಸವರಾಜ ಬೊಮ್ಮಾಯಿ ಅವರಿಗೆ ರೈತ ಸಂಘದಿಂದ ಮನವಿ

# ರೈತರ ಕಷ್ಟಕ್ಕೆ ಸರ್ಕಾರ ಸ್ಪಂದಿಸಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಈ ವರ್ಷದ ಅತಿವೃಷ್ಟಿಗೆ ಮುಂಗಾರು ಬೆಳೆಗಳೆಲ್ಲ ಹಾಳಾಗಿದ್ದು, ರೈತರು ಸಂಕಷ್ಟದಲ್ಲಿದ್ದಾರೆ. ರೈತರಿಗೆ ಬೆಳೆ ಹಾನಿ, ಬೆಳೆ ವಿಮೆ ಪರಿಹಾರ ಸಿಗಬೇಕು, ಬೆಂಬಲ ಬೆಲೆ ವ್ಯವಸ್ಥೆ ಕಲ್ಪಿಸಬೇಕು ಮತ್ತು ರೈತರ ಸಾಲ ಮನ್ನಾ ಆಗಬೇಕು. ಈ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಗಮನ ಸೆಳೆದು ರೈತರ ಕಷ್ಟಕ್ಕೆ ಸ್ಪಂದಿಸಬೇಕು ಎಂದು ಬುಧವಾರ ಲಕ್ಷ್ಮೇಶ್ವರದಲ್ಲಿ ಮಾಜಿ ಸಿಎಂ ಹಾಗೂ ಸಂಸದರಾದ ಬಸವರಾಜ ಬೊಮ್ಮಾಯಿ ಅವರಿಗೆ ರೈತರು ಮನವಿ ಸಲ್ಲಿಸಿದರು.

ಈ ವೇಳೆ ಹಿರಿಯ ರೈತರಾದ ಎಸ್.ಪಿ. ಪಾಟೀಲ ಮಾತನಾಡಿ, ಮುಂಗಾರಿನ ಪ್ರಮುಖ ಬೆಳೆ ಹೆಸರು ಸಂಪೂರ್ಣ ಹಾಳಾಗಿವೆ. ಅಳಿದುಳಿದ ಬೆಳೆಗೂ ಬೆಲೆ ಇಲ್ಲದಂತಾಗಿದೆ. ಇದೀಗ ಈರುಳ್ಳಿ ಬೆಳೆಯೂ ಹಾಳಾಗಿದ್ದು, ಬೆಲೆಯೂ ಇಲ್ಲದಂತಾಗಿದೆ. ರೈತರು ಕಷ್ಟಪಟ್ಟು ಬೆಳೆದ ಎಲ್ಲ ಬೆಳೆಗಳು ಎಂಎಸ್‌ಪಿಗಿಂತ ಕಡಿಮೆ ದರದಲ್ಲಿ ಮಾರಾಟ ಆಗುತ್ತಿದ್ದು, ರೈತರು ಕಂಗಾಲಾಗಿದ್ದಾರೆ. ಕಾರಣ ಬೆಂಬಲ ಬೆಲೆಯಲ್ಲಿ ರೈತರ ಉತ್ಪನ್ನಗಳನ್ನು ಖರೀದಿಸಲು ಕೇಂದ್ರ ಸರ್ಕಾರದ ಗಮನ ಸೆಳೆಯಬೇಕು. ಸರ್ಕಾರದಿಂದ ರೈತರ ಸಾಲ ಮನ್ನಾ ಆಗಬೇಕು. ಪ್ರತಿ ಎಕರೆಗೆ 30 ಸಾವಿರ ರೂ ಬೆಳೆಹಾನಿ ಪರಿಹಾರ ಸಿಗಬೇಕು ಎಂದು ಆಗ್ರಹಿಸಿದರು.

ಕೃಷಿಕ ಸಮಾಜ (ನವದೆಹಲಿ)ದ ತಾಲೂಕು ಘಟಕದ ಅಧ್ಯಕ್ಷ ಚನ್ನಪ್ಪ ಷಣ್ಮುಖಿ ಮಾತನಾಡಿ, 2019ರಿಂದ ಇಲ್ಲಿಯವರೆಗೆ ಕಿಸಾನ ಸಮ್ಮಾನ ಯೋಜನೆಯ ಹೊಸ ಫಲಾನುಭವಿ ರೈತರಿಗೆ ಅವಕಾಶ ದೊರೆತಿಲ್ಲ. 2025ರಲ್ಲಿ ನೋಂದಾಯಿಸಿಕೊಂಡ ರೈತರಿಗೂ ಈ ಯೋಜನೆ ದೊರೆಯುವಂತೆ ಮಾಡಬೇಕು ಎಂದು ಆಗ್ರಹಿಸಿದರು.

ಮನವಿ ಸ್ವೀಕರಿಸಿದ ಬಸವರಾಜ ಬೊಮ್ಮಾಯಿ ಅವರು ರೈತರ ಪರವಾದ ಎಲ್ಲ ನ್ಯಾಯಯುತ ಬೇಡಿಕೆಗಳ ಇಡೇರಿಕೆಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಗಮನ ಸೆಳೆಯುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದರು.

ಈ ವೇಳೆ ರೈತರಾದ ವಿರೂಪಾಕ್ಷಪ್ಪ ಆದಿ, ಬಸವರಾಜ ಮೆಣಸಿನಕಾಯಿ, ಉಮೇಶ ಚಿಕ್ಕಣ್ಣವರ, ಲಕ್ಷ್ಮೇಶ್ವರ ತಾಲೂಕು ವೀರಶೈವ ಲಿಂಗಾಯತ ಪಂಚಮಸಾಲಿ ಸಮಾಜದ ಅಧ್ಯಕ್ಷ ಮಂಜುನಾಥ ಮಾಗಡಿ, ಈರಣ್ಣ ಆದಿ, ಬಸವರಾಜ ಜಾಲಗಾರ, ಅಭಯ ಜೈನ್, ಹೊನ್ನಪ್ಪ ವಡ್ಡರ, ಚಂದ್ರು ಮಾಗಡಿ, ಪರಶುರಾಮ ಮೈಲಾರಿ, ಈರಪಣ್ಣ ಮರಳಿಹಳ್ಳಿ, ನಾಗಯ್ಯ ಮಠಪತಿ, ಮುತ್ತು ನಿರಲಗಿ, ಮಲ್ಲಿಕಾರ್ಜುನ ನೀರಾಲೋಟಿ, ಮುತ್ತಣ್ಣಶೆಟ್ರ ವಡಕಣ್ಣವರ, ಜಿ.ಪಿ. ಮಾಡಳ್ಳಿ, ವಿರೂಪಾಕ್ಷಪ್ಪ ವಡಕಣ್ಣವರ, ರುದ್ರಪ್ಪ ಚಾಕಲಬ್ಬಿ, ಜಿ.ಆರ್. ಪಾಟೀಲ ಸೇರಿ ತಾಲೂಕಾ ಕೃಷಿಕ ಸಮಾಜ ನವದೆಹಲಿ ಹಾಗೂ ಕರ್ನಾಟಕ ರಾಜ್ಯ ರೈತ ಸಂಘಟನೆ ಸದಸ್ಯರು ಇದ್ದರು.



ಇದೇ ಸಂದರ್ಭದಲ್ಲಿ ಪಟ್ಟಣದ ಮುಖಂಡರು ಪಾಳಾ-ಬಾದಾಮಿ ರಾಜ್ಯ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಮೇಲ್ದರ್ಜೆಗೇರಿಸಬೇಕು ಎಂದು ಮನವಿ ಸಲ್ಲಿಸಿದರಲ್ಲದೆ, ಲಕ್ಷ್ಮೇಶ್ವರದ ಕಾಳಿಕಾದೇವಿ ಸಮುದಾಯ ಭವನ ಹಾಗೂ ಜೀರ್ಣೋದ್ಧಾರ ಸಮಿತಿ ಸದಸ್ಯರು ಇತಿಹಾಸ ಪ್ರಸಿದ್ಧ ಕಾಳಿಕಾದೇವಿ ದೇವಸ್ಥಾನವನ್ನು ಜೀರ್ಣೋದ್ಧಾರ ಮಾಡಬೇಕು ಎಂದು ಮನವಿ ಸಲ್ಲಿಸಿದರು.

## ಸಂಪಾದಕೀಯ

# ಕಲ್ಯಾಣ ಕರ್ನಾಟಕ ಸಚಿವಾಲಯ ಸದುಪಯೋಗಕ್ಕೆ ಹೊಸ ಹೆಜ್ಜೆ

ಕಳೆದ ಹಲವು ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗೆ ಹೊಸ ಚೈತನ್ಯ ಬಂದಿದೆ. ಸಂವಿಧಾನದ 371 (ಜೆ) ಕಲಂ ಜಾರಿಯಾದ ಬಳಿಕವೂ, ಆರ್ಥಿಕ ಹಾಗೂ ಅಧಿಕಾರ ಹಂಚಿಕೆ ವಿಚಾರಗಳಲ್ಲಿ ಸ್ವಾಯತ್ತ ನಿರ್ಧಾರ ತೆಗೆದುಕೊಳ್ಳಲು ಇರುವ ಅಡೆತಡೆಗಳು, ಭಾಗದ ಸಮಗ್ರ ಅಭಿವೃದ್ಧಿಗೆ ಅಡ್ಡಿಯಾಗಿದ್ದವು.

ಆದರೆ, ಇದೀಗ ರಾಜ್ಯ ಸರ್ಕಾರವು ಕಲ್ಯಾಣ ಕರ್ನಾಟಕಕ್ಕೆ ಪ್ರತ್ಯೇಕ ಸಚಿವಾಲಯವನ್ನು ರಚಿಸುವ ತೀರ್ಮಾನ ಕೈಗೊಂಡಿರುವುದು ಈ ಭಾಗದ ಜನತೆಗೆ ಭರವಸೆಯ ಬೆಳಕು ಮೂಡಿಸಿದೆ.

ವಾರ್ಷಿಕವಾಗಿ ಸಾವಿರಾರು ಕೋಟಿ ರೂಪಾಯಿ ಅನುದಾನ ಲಭ್ಯವಿದ್ದರೂ, ನೇಮಕಾತಿ, ಮುಂಬಡ್ತಿ, ಮತ್ತು ಅನುದಾನ ಹಂಚಿಕೆಯಂತಹ ಪ್ರಮುಖ ನಿರ್ಧಾರಗಳನ್ನು ತೆಗೆದುಕೊಳ್ಳಲು ಇದ್ದ ಸ್ವತಂತ್ರ ಅಧಿಕಾರಕ್ಕೆ ಈಗ ಪ್ರತ್ಯೇಕ ಸಚಿವಾಲಯದಿಂದ ಚುರುಕು ಸಿಗಲಿದೆ. ಇದು ಕೇವಲ ಒಂದು ಆಡಳಿತಾತ್ಮಕ ಬದಲಾವಣೆಗಿಂತ ಹೆಚ್ಚಾಗಿ, ಈ ಭಾಗದ ಜನರ ಆಶೋತ್ತರಗಳನ್ನು ಈಡೇರಿಸುವ ಮಹತ್ವದ ಹೆಜ್ಜೆಯಾಗಿದೆ.

ಈ ಸಚಿವಾಲಯದ ರಚನೆಯಿಂದಾಗಿ, ಸ್ಥಳೀಯ ಅಗತ್ಯಗಳನ್ನು ಅರ್ಥಮಾಡಿಕೊಂಡು ಯೋಜನೆಗಳನ್ನು ರೂಪಿಸುವುದು ಸುಲಭವಾಗಲಿದೆ. ಶಿಕ್ಷಣ, ಉದ್ಯೋಗ, ಆರೋಗ್ಯ ಮತ್ತು ಮೂಲಸೌಕರ್ಯಗಳ ವಲಯದಲ್ಲಿ ಸೂಕ್ತ ಹಂಚಿಕೆ ಮತ್ತು ಜಾರಿಗೆ ತರಲು ಇದರಿಂದ ಅನುಕೂಲವಾಗಲಿದೆ.

ಈ ಭಾಗದ ಸ್ಥಳೀಯರಿಗೆ ಸರ್ಕಾರಿ ಉದ್ಯೋಗಗಳಲ್ಲಿ ಸಿಗುವ ಮೀಸಲಾತಿಯನ್ನು ಸಮರ್ಥವಾಗಿ ಬಳಸಿಕೊಳ್ಳಲು ಮತ್ತು ಹಿಂದಿನ ತಾರತಮ್ಯವನ್ನು ನಿವಾರಿಸಲು ಈ ಸಚಿವಾಲಯಕ್ಕೆ ಹೆಚ್ಚಿನ ಅಧಿಕಾರ ಸಿಗಲಿದೆ. ಆದರೆ, ಕೇವಲ ಸಚಿವಾಲಯ ರಚಿಸುವುದಷ್ಟೇ ಸಾಲದು. ಅದರ ಕಾರ್ಯನಿರ್ವಹಣೆ ಪಾರದರ್ಶಕವಾಗಿರಬೇಕು ಮತ್ತು ಜವಾಬ್ದಾರಿಯುತವಾಗಿರಬೇಕು. ಭ್ರಷ್ಟಾಚಾರಕ್ಕೆ ಅವಕಾಶ ನೀಡದೆ, ನಿಜವಾದ ಫಲಾನುಭವಿಗಳನ್ನು ತಲುಪುವಂತಹ ವ್ಯವಸ್ಥೆಯನ್ನು ರೂಪಿಸಬೇಕು. ಇದರಿಂದ ಮಾತ್ರ 371 (ಜೆ) ಕಲಂನ ಮೂಲ ಉದ್ದೇಶ ಈಡೇರಿ, ಕಲ್ಯಾಣ ಕರ್ನಾಟಕವು ನಿಜವಾದ ಅರ್ಥದಲ್ಲಿ ಅಭಿವೃದ್ಧಿಯ ಹಾದಿಯಲ್ಲಿ ಮುನ್ನಡೆಯಲು ಸಾಧ್ಯವಾಗುತ್ತದೆ. ಈ ಹೆಜ್ಜೆಯು ಭಾಗದ ದಶಕಗಳ ಬೇಡಿಕೆಗೆ ದಕ್ಕಿದ ಪ್ರತಿಫಲವಾಗಿದೆ.

# ಸದನಾಂದ ಗೌಡ ಬ್ಯಾಂಕ್ ಖಾತೆ ಹ್ಯಾಕ್: 3 ಲಕ್ಷ ದೋಚಿದ ಸೈಬರ್ ಖದೀಮರು!

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಡಿಜಿಟಲ್ ಬ್ಯಾಂಕಿಂಗ್ ನಮ್ಮ ದಿನನಿತ್ಯದ ಜೀವನದ ಒಂದು ಭಾಗವಾಗುತ್ತಿದ್ದಂತೆ, ಸೈಬರ್ ವಂಚನೆ ಮತ್ತು ಬ್ಯಾಂಕ್ ಖಾತೆ ಹ್ಯಾಕಿಂಗ್ ಪ್ರಕರಣಗಳು ಹೆಚ್ಚುತ್ತಿವೆ. ಇದೀಗ ಮಾಜಿ ಸಿಎಂ ಸದನಾಂದ ಗೌಡ ಅವರ ಬ್ಯಾಂಕ್ ಖಾತೆಯನ್ನು ಹ್ಯಾಕ್ ಮಾಡಿ ಸೈಬರ್ ಕಳ್ಳರು 3 ಲಕ್ಷ ರೂ. ಹಣವನ್ನು ಕದ್ದಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ 75 ನೇ ಜನ್ಮ ದಿನಾಚರಣೆ ಹಿನ್ನೆಲೆಯಲ್ಲಿ ಬಿಜೆಪಿ 75 ಪೌರ ಕಾರ್ಮಿಕರಿಗೆ ಆರ್‌ಎಂವಿ ಎಕ್ಸ್‌ಟೆನ್ಷನ್‌ನ ಬಿಬಿಎಂಪಿ ಪಾರ್ಕ್‌ನಲ್ಲಿ ಸನ್ಮಾನ ಕಾರ್ಯಕ್ರಮ ಆಯೋಜಿಸಿತ್ತು. ಈ ಕಾರ್ಯಕ್ರಮಕ್ಕೆ ಆಗಮಿಸಿದ ಡಿವಿಎಸ್ ಮಾಧ್ಯಮಗಳ ಜೊತೆ ಮಾತನಾಡಿ ನಿನ್ನೆ ನನ್ನ 3 ಅಕೌಂಟ್ ಹ್ಯಾಕ್ ಮಾಡಿದ್ದಾರೆ.

## ಇರುವೆ ಹಳ್ಳದಲ್ಲಿ ಕೊಚ್ಚಿಹೋಗಿದ್ದ ಆರೋಗ್ಯ ಇಲಾಖೆಯ ಮಹಿಳಾ ಸಿಬ್ಬಂದಿ ಶವವಾಗಿ ಪತ್ತೆ

# ಆಸ್ಪತ್ರೆಗಳಲ್ಲಿ ಆವರಿಸಿದ ಮೌನ!

**■ವಿಜಯಸಾಕ್ಷಿ ಸುದ್ದಿ, ರೋಣ**

ರೋಣ ತಾಲೂಕಿನಲ್ಲಿ ಮಂಗಳವಾರ ಮಧ್ಯಾಹ್ನ ಸುರಿದ ಭಾರೀ ಮಳೆಯಿಂದ ಯಾಸ ಹಡಗಲಿ ಹಾಗೂ ಕೌಜಗೇರಿ ಗ್ರಾಮದ ನಡುವಿನ ಇರುವೆ ಹಳ್ಳಕ್ಕೆ ಸಿಲುಕಿ ಕೊಚ್ಚಿ ಹೋಗಿದ್ದ ಕಿರಿಯ ಆರೋಗ್ಯ ಸಹಾಯಕಿ ಬಸಮ್ಮ ಗುರಿಕಾರ (32) ಬುಧವಾರ ಬೆಳಗಿನ ಜಾವ ಇರುವೆ ಹಳ್ಳದಲ್ಲಿ ಶವವಾಗಿ ಪತ್ತೆಯಾಗಿದ್ದಾರೆ.





ತಾಲೂಕಿನ ಬೆಳವಣಕಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕಿರಿಯ ಆರೋಗ್ಯ ಸಹಾಯಕಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಬಸಮ್ಮ ಗುರಿಕಾರ ಕರ್ತವ್ಯದ ನಿಮಿತ್ತ ಆರೋಗ್ಯ ಶಿಬಿರದಲ್ಲಿ ಪಾಲ್ಗೊಳ್ಳಲು ಯಾಸ ಹಡಗಲಿ ಗ್ರಾಮಕ್ಕೆ ತೆರಳಿದ್ದರು. ಕರ್ತವ್ಯ ಮುಗಿಸಿ ವಾಪಸ್ ಬೆಳವಣಕಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಬರುವಾಗ ಇರುವೆ ಹಳ್ಳದ ರಭಸಕ್ಕೆ ಸಿಲುಕಿ ನಾಪತ್ತೆಯಾಗಿದ್ದರು.

ಮಂಗಳವಾರ ಯಾಸ ಹಡಗಲಿ ಗ್ರಾಮದಲ್ಲಿ ಆರೋಗ್ಯ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು. ಈ ಶಿಬಿರಕ್ಕೆ ಬಸಮ್ಮ ಗುರಿಕಾರ ಸಹ ತೆರಳಿದ್ದರು. ಆದರೆ ಅಂದು ಮಧ್ಯಾಹ್ನ ಭಾರೀ ಪ್ರಮಾಣದಲ್ಲಿ ಮಳೆ ಸುರಿಯತೊಡಗಿತ್ತು. ಆಗ ಆಸ್ಪತ್ರೆಯ ಸಮುದಾಯ ಆರೋಗ್ಯಾಧಿಕಾರಿ ಬಸವರಾಜ ಕಡಪಟ್ಟಿ, ಹಿರಿಯ ಆರೋಗ್ಯಾಧಿಕಾರಿ ವೀರಸಂಗಯ್ಯ ಹಿರೇಮಠ ಇವರುಗಳ ಜೊತೆಯಲ್ಲಿ ಬೈಕ್ ಮೂಲಕ ಬಸಮ್ಮ ಗುರಿಕಾರ ಸಹ ಆಗಮಿಸಿದ್ದರು. ಇವರು ಬರುತ್ತಿದ್ದಂತೆ ಇರುವೆ ಹಳ್ಳದಲ್ಲಿ ನೀರಿನ ಮಟ್ಟ ಏರತೊಡಗಿದ್ದು, ಬೈಕ್ ನಿಯಂತ್ರಣ ತಪ್ಪಿದ ಪರಿಣಾಮ ಬಸಮ್ಮ ಗುರಿಕಾರ ಹಳ್ಳದಲ್ಲಿ ತೇಲಿ ನಾಪತ್ತೆಯಾಗಿದ್ದರು.

> ಆರೋಗ್ಯ ಇಲಾಖೆಯ ಮಹಿಳಾ ಸಿಬ್ಬಂದಿಯ ಸಾವಿನ ಸುದ್ದಿ ನಿಜಕ್ಕೂ ನೊವು ತರಿಸಿದೆ. ಕುಟುಂಬಸ್ಥರಿಗೆ ದೇವರು ದುಃಖ ಭರಿಸುವ ಶಕ್ತಿಯನ್ನು ನೀಡಲಿ. ಇನ್ನು ಗಾಯಾಳು ಸಿಬ್ಬಂದಿಗಳು ಸಹ ಶೀಘ್ರ ಚೇತರಿಸಿಕೊಳ್ಳಲಿ. ಆರೋಗ್ಯ ಇಲಾಖೆಯಲ್ಲಿ ಕೆಲಸ ನಿರ್ವಹಿಸುವ ವೈದ್ಯರ ಮತ್ತು ಸಿಬ್ಬಂದಿಗಳ ಸೇವೆ ಸದಾ ಸ್ಮರಣೀಯ.
>
> **– ಜಿ.ಎಸ್. ಪಾಟೀಲ.**
> ಶಾಸಕರು, ರೋಣ.

ಪುರುಷ ಸಿಬ್ಬಂದಿಗಳಿಬ್ಬರೂ ಈಜಿ ದಡ ಸೇರಿದ್ದರು. ಮಂಗಳವಾರ ಸಂಜೆಯಿಂದ ಮಹಿಳಾ ಸಿಬ್ಬಂದಿಯ ಪತ್ತೆಗಾಗಿ ಪೊಲೀಸ್, ಎನ್‌ಡಿಆರ್‌ಎಫ್, ಅಗ್ನಿಶಾಮಕ, ಕಂದಾಯ ಇಲಾಖೆ ರಕ್ಷಣಾ ಕಾರ್ಯಾಚರಣೆ ನಡೆಸಿತ್ತು. ಆದರೆ ಕತ್ತಲು ಆವರಿಸಿದ್ದರಿಂದ ರಕ್ಷಣಾ ಕಾರ್ಯವನ್ನು ಸ್ಥಗಿತಗೊಳಿಸಲಾಗಿತ್ತು. ಬುಧವಾರ ಬೆಳಿಗ್ಗೆ ಪುನಃ ಶೋಧ ನಡೆಸಿದಾಗ ಹಳ್ಳದಲ್ಲಿದ್ದ ಜಾಲಿ ಕಂಟಿಯ ಪೊದೆಯಲ್ಲಿ ಬಸಮ್ಮ ಗುರಿಕಾರ ಶವವಾಗಿ ಪತ್ತೆಯಾದರು.

ಸಹೋದ್ಯೋಗಿಯ ದುರಂತ ಸಾವಿನ ಸುದ್ದಿ ತಿಳಿಯುತ್ತಿದ್ದಂತೆ ಬೆಳವಣಕಿ ಮತ್ತು ರೋಣ ಸರಕಾರಿ ಆಸ್ಪತ್ರೆಗಳಲ್ಲಿ ಮೌನ ಆವರಿಸಿತ್ತು. ತಾಲೂಕಿನ ಸರಕಾರಿ ಆಸ್ಪತ್ರೆಗಳ ವೈದ್ಯರುಗಳು ಹಾಗೂ ಸಿಬ್ಬಂದಿಗಳು ಬಸಮ್ಮ ಗುರಿಕಾರರ ಅಂತಿಮ ದರ್ಶನ ಪಡೆದರು.

# ಅಟ್ಯಾಪಟ್ಯಾ ತರಬೇತಿ ಶಿಬಿರದ ಸಮಾರೋಪ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ತರಬೇತಿ ಕಾರ್ಯಾಗಾರದಲ್ಲಿ ತರಬೇತುದಾರರು ನೀಡಿದ ತರಬೇತಿಯನ್ನು ಚಾಚೂ ತಪ್ಪದೆ ಅನುಸರಿಸಿ ಕ್ರೀಡೆಯಲ್ಲಿ ತೊಡಗಿದಲ್ಲಿ ಜಯ ನಿಶ್ಚಿತ. ಕರ್ನಾಟಕ ತಂಡದಿಂದ ಭಾಗವಹಿಸುತ್ತಿರುವ ತಾವೆಲ್ಲರೂ ರಾಷ್ಟ್ರಮಟ್ಟದಲ್ಲಿ ಅತ್ಯುತ್ತಮ ಪ್ರದರ್ಶನ ತೋರಿ ರಾಜ್ಯದ ಕೀರ್ತಿ ಪತಾಕೆ ಹಾರಿಸಿ ಎಂದು ಶ್ರೀ ಅಭಿನವ ಅನ್ನದಾನೇಶ್ವರ ಪ.ಪೂ ಮಹಾವಿದ್ಯಾಲಯದ ಪ್ರಾಚಾರ್ಯೆ ಅನಸೂಯಾ ಪಾಟೀಲ ಹಾರೈಸಿದರು.

ಇಲ್ಲಿನ ಸರಕಾರಿ ಕನ್ನಡ ಗಂಡು ಮಕ್ಕಳ ಶಾಲಾ ಮೈದಾನದಲ್ಲಿ ಚೈತನ್ಯ ಕ್ರೀಡಾ ಸಂಸ್ಥೆಯಿಂದ ಹಮ್ಮಿಕೊಂಡಿದ್ದ ಕರ್ನಾಟಕ ತಂಡದ ಸಬ್ ಜ್ಯೂನಿಯರ್ ಬಾಲಕಿಯರ ಅಟ್ಯಾಪಟ್ಯಾ ತರಬೇತಿ ಶಿಬಿರದ ಸಮಾರೋಪ ಸಮಾರಂಭದಲ್ಲಿ ಕ್ರೀಡಾಪಟುಗಳಿಗೆ ಸಮವಸ್ತ್ರ ವಿತರಿಸಿ ಅವರು ಮಾತನಾಡಿದರು. ಸ್ಥಳೀಯ ಚೈತನ್ಯ ಕ್ರೀಡಾಸಂಸ್ಥೆ ಯಾವುದೇ ಫಲಾಪೇಕ್ಷೆ ಇಲ್ಲದೇ ಹಲವಾರು ವರ್ಷಗಳಿಂದ ಕ್ರೀಡಾಪಟುಗಳಿಗೆ ವಿವಿಧ ಕ್ರೀಡೆಗಳ ತರಬೇತಿ ನೀಡುತ್ತಾ ಬಂದಿದ್ದು, ಊಟ ವಸತಿಯೊಂದಿಗೆ ಪ್ರತಿ ಮಕ್ಕಳನ್ನೂ ತಮ್ಮ ಮಕ್ಕಳಂತೆ ಲಾಲನೆ-ಪಾಲನೆ ಮಾಡುವ ಮೂಲಕ ಸಂಸ್ಥೆ ಘನತೆಯನ್ನು ಕಾಯ್ದುಕೊಂಡು ಬಂದಿದೆ ಎಂದರು.

ರೋಣ ತಾಲೂಕಾ ದೈಹಿಕ ಶಿಕ್ಷಣ ಪರಿವೀಕ್ಷಕ ಆರ್.ಎಸ್. ನರೇಗಲ್ಲ, ಚೈತನ್ಯ ಕ್ರೀಡಾ ಸಂಸ್ಥೆಯ ಅಧ್ಯಕ್ಷ ನಿಂಗರಾಜ ಬೇವಿನಕಟ್ಟಿ ಮಾತನಾಡಿದರು.

ಈ ಸಂದರ್ಭದಲ್ಲಿ ಎಂಸಿಎಸ್ ಶಾಲೆಯ ಮುಖ್ಯೋಪಾಧ್ಯಾಯೆ ಲಲಿತಾ ಕಲಾಲಬಂಡಿ, ತರಬೇತುದಾರ ಶಿಕ್ಷಕ ವಿ.ಎ. ಕುಂಬಾರ, ಸಂಸ್ಥೆಯ ಕಾರ್ಯದರ್ಶಿ ಸಂತೋಷ ಯಳಮಲಿ, ಪ್ರವೀಣ ಘಂಟಿ, ಜ್ಯೋತಿ ಪೂಜಾರ, ಅನಿತಾ ಮಾದರ, ಜ್ಯೋತಿ ಬೆಳವಟಗಿ, ಪ್ರೀತಿ ಬುಳ್ಳಾ, ಸುರೇಖಾ ಕೊಂಡಿ, ವೀರೇಶ ಕುರಿ ಸೇರಿದಂತೆ ಕ್ರೀಡಾಪ್ರೇಮಿಗಳು ಭಾಗವಹಿಸಿದ್ದರು.

# ಏಡ್ಸ್ ಜಾಗೃತಿಗಾಗಿ ಬೈಕ್ ರ್‍ಯಾಲಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ತೀವ್ರಗೊಳಿಸಿದ ಎಚ್‌ಐವಿ ಏಡ್ಸ್ ಪ್ರಚಾರಾಂದೋಲನ ಬೈಕ್ ರ್‍ಯಾಲಿಗೆ ಡಿಟಿಓ ಡ್ಯಾಪ್ಕೋ ಅಧಿಕಾರಿ ಡಾ. ಅರುಂಧತಿ ಕೆ ಬುಧವಾರ ಜಿಲ್ಲಾಡಳಿತ ಭವನದ ಆವರಣದಲ್ಲಿ ಚಾಲನೆ ನೀಡಿದರು.

ಬೈಕ್ ರ್‍ಯಾಲಿಯು ಜಿಲ್ಲಾಡಳಿತ ಭವನದಿಂದ ಪ್ರಾರಂಭವಾಗಿ ಟಿಪ್ಪು ಸರ್ಕಲ್, ಮುಳಗುಂದ ನಾಕಾ, ಜುಮ್ಮಾ ಮಸೀದಿ, ಟಾಂಗಾ ಕೂಟ, ಮಹೇಂದ್ರಕರ ಸರ್ಕಲ್, ಗಾಂಧಿ ಸರ್ಕಲ್, ಪೋಸ್ಟ್ ಆಫೀಸ್ ಮೂಲಕ ಸಾಗಿ ನಗರದ ಕೆ.ಸಿ. ರಾಣಿ ರಸ್ತೆಯಲ್ಲಿರುವ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಗೆ ಬಂದು ಮುಕ್ತಾಯಗೊಂಡಿತು.

ಈ ಸಂದರ್ಭದಲ್ಲಿ ನೌಕರರ ಸಂಘದ ಅಧ್ಯಕ್ಷ ಡಾ. ಬಸವರಾಜ ಬಳ್ಳಾರಿ, ಜಿಲ್ಲಾ ಮೇಲ್ವಿಚಾರಕರಾದ ಬಸವರಾಜ ಲಾಳಗಟ್ಟಿ, ಆರೋಗ್ಯ ಇಲಾಖೆಯ ಎನ್‌ಟಿಇಪಿ, ಡ್ಯಾಪ್ಕೋ, ಐಸಿಟಿಸಿ, ಎಆರ್‌ಟಿ ಸಿಬ್ಬಂದಿ, ರಕ್ಷಣೆ, ಸೃಷ್ಟಿ ಸಂಕುಲ, ನವಚೇತನ ಮತ್ತು ಚೈತನ್ಯ ಸಂಸ್ಥೆಯ ಸಿಬ್ಬಂದಿಗಳು ಹಾಜರಿದ್ದರು.

# ನಿವೃತ್ತ ಸೈನಿಕರಿಂದ ಕಲಾವಿದರಿಗೆ ನೆರವು



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನರೇಗಲ್ಲದಲ್ಲಿ ಶ್ರೀ ಗುರು ಕುಮಾರೇಶ್ವರ ನಾಟ್ಯ ಸಂಘದವರು ನಾಟಕ ಪ್ರದರ್ಶನ ಮಾಡುತ್ತಿರುವ ಸುದ್ದಿಯನ್ನು ತಿಳಿದ ನಿವೃತ್ತ ಸೈನಿಕರು ಅವರಿಗೆ ಸಹಾಯಹಸ್ತ ಚಾಚಿ ಮಾನವೀಯತೆ ಮೆರೆದಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ, ಕಲಾವಿದರು ನಮ್ಮ ನಾಡಿನ ಆಸ್ತಿಯಿದ್ದಂತೆ. ಅವರನ್ನು ಸಲುಹಬೇಕಾದುದು ನಮ್ಮೆಲ್ಲರ ಆದ್ಯ ಕರ್ತವ್ಯ. ಪತ್ರಿಕೆಯಲ್ಲಿ ಕಲಾವಿದರ ಶೋಚನೀಯ ಬದುಕಿನ ಬಗ್ಗೆ ಓದಿದ ನಂತರ ನಮ್ಮೆಲ್ಲ ಸ್ನೇಹಿತರೊಂದಿಗೆ ಮಾತನಾಡಿದೆ. ಅವರೆಲ್ಲರೂ ಉದಾರ ಮನದ ಸಹಾಯವನ್ನು ನೀಡಿ ಸಂಘಕ್ಕೆ ತಮ್ಮ ಅಲ್ಪ ಕಾಣಿಕೆಯನ್ನು ಸಲ್ಲಿಸಿದ್ದಾರೆ. ಇಲ್ಲಿಗೆ ಬಂದ ಕಲಾವಿದರು ಬರಿಗೈಯಲ್ಲಿ ಮರಳಬಾರದು. ಆದ್ದರಿಂದ ಪಟ್ಟಣದ ಮತ್ತು ಸುತ್ತಲಿನ ಗ್ರಾಮಗಳ ವಿವಿಧ ಸಂಘ-ಸಂಸ್ಥೆಗಳವರು ತಮ್ಮ ಕೈಯಿಂದಾದ ಸಹಾಯ ಮಾಡಿ, ನಾಟಕವನ್ನು ನೋಡಿ ಪ್ರೋತ್ಸಾಹಿಸಬೇಕೆಂದರು.

ಧನ ಸಹಾಯ ಸ್ವೀಕರಿಸಿದ ಮಾಲಕಿ ಭಾರತಿ ಬಾಗಲಕೋಟಿ ಮಾತನಾಡಿ, ನಿವೃತ್ತ ಸೈನಿಕ ಸಂಘದವರು ನಮ್ಮ ಮೇಲೆ ಕರುಣೆ ತೋರಿಸಿ ಇಲ್ಲಿಯವರೆಗೆ ಬಂದು ನಮಗೆ ಧನ ಸಹಾಯ ಮಾಡಿದ್ದನ್ನು ನಾವೆಂದಿಗೂ ಮರೆಯುವುದಿಲ್ಲ ಎಂದರು.

ಈ ಸಂದರ್ಭದಲ್ಲಿ ನಿವೃತ್ತ ಸೈನಿಕರಾದ ಕುಮಾರಸ್ವಾಮಿ ಕೋರಧಾನ್ಯಮಠ, ರಾಮಪ್ಪ ರೋಣದ, ಉಮೇಶ, ದಿನೇಶ ಕೋಗಿಲೆ, ಸಂಗಪ್ಪ ಕುಷ್ಟಗಿ, ಪ್ರಭುದೇವ ಮುಕ್ಕನಗೌಡರ, ಉಮೇಶ ಕರಮುಡಿ, ಗುರುಶಾಂತಗೌಡ ಮಲ್ಲನಗೌಡರ, ಮಂದಾಲಪ್ಪ ಸಂಗನಾಳ, ಶಿವಪ್ಪ ಶಿವಾಪುರ, ಮಲ್ಲಿಕಾರ್ಜುನ ಮಲ್ಲನಗೌಡ್ರ, ಸಿದ್ರಾಮಪ್ಪ ಕಟ್ಟಿಮನಿ, ದಾವಲಸಾಬ ಕಿಲ್ಲೇದಾರ, ಮಲ್ಲಪ್ಪ ಕಡೆತೋಟದ, ಬಸವರಾಜ ಕಡೆತೋಟದ, ಜಿ.ಎಸ್. ಮಲ್ಲನಗೌಡರ, ರೇವಣಸಿದ್ದಪ್ಪ ನರಗುಂದ, ಈರಪ್ಪ ದೊಡ್ಡಣ್ಣವರ, ಶಿವಾನಂದ, ಎಂ.ಬಿ. ಕಡೆತೋಟದ, ಬಸವೇಶ್ವರ ಚಿಕ್ಕೊಪ್ಪದ, ಕರಡಿ ಇನ್ನಿತರರಿದ್ದರು.

# ಶ್ರೀ ವಿಶ್ವಕರ್ಮ ಸಂಸ್ಮರಣಾ ದಿನಾಚರಣೆ




**■ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ನಗರದ ಹೊಸಪೇಟ ಚೌಕ್ ಹತ್ತಿರವಿರುವ ಶ್ರೀ ಕಾಳಿಕಾ ದೇವಿ ದೇವಸ್ಥಾನದಲ್ಲಿ ಕಾಳಿಕಾ ದೇವಿ ದೇವಸ್ಥಾನ ಟ್ರಸ್ಟ್ ಕಮಿಟಿ ವತಿಯಿಂದ ಭಗವಾನ್ ಶ್ರೀ ವಿಶ್ವಕರ್ಮ ಸಂಸ್ಮರಣಾ ದಿನಾಚರಣೆ ಆಚರಿಸಲಾಯಿತು.

ಟ್ರಸ್ಟಿನ ಅಧ್ಯಕ್ಷ ಶ್ರೀಧರ ಕೊಣ್ಣೂರ, ಪ್ರಮುಖರಾದ ಮೌನೇಶ ಚಿ.ಬಡಿಗೇರ(ನರೇಗಲ್ಲ), ಎನ್.ಐ. ಪತ್ತಾರ, ಪ್ರಕಾಶ ಬಡಿಗೇರ, ಅಶೋಕ ಸುತಾರ, ಮಹೇಶ ಬಡಿಗೇರ, ಗೋಪಾಲ ಬಡಿಗೇರ, ವಿಶ್ವನಾಥ ಕಮ್ಮಾರ, ವಿಜಯ ಬೆಂತೂರ, ಅಶೋಕ ಬಡಿಗೇರ, ಶ್ರೀಕಾಂತ ಬಡಿಗೇರ, ಮೌನೇಶ ಬಡಿಗೇರ, ದ್ಯಾಮಣ್ಣ ಬಡಿಗೇರ, ಆನಂದ ಕಮ್ಮಾರ, ಶಂಕ್ರಪ್ಪ ಬಡಿಗೇರ, ರಮೇಶ ಬಡಿಗೇರ, ರಾಘವೇದ್ರ ಬೆಂತೂರ, ರವಿ ಬಡಿಗೇರ, ರಾಘವೇದ್ರ ಬಡಿಗೇರ, ಮಂಜುನಾಥ ಬಡಿಗೇರ, ಸತೀಶ ಹೊರಪೇಟೆ, ವೀರೇಶ ಬಡಿಗೇರ, ವಿನಾಯಕ ರಾಮದುರ್ಗ, ಪ್ರಕಾಶ ಬೆಂತೂರ, ವಿಶ್ವಕರ್ಮ ಗಾಯಿತ್ರಿ ಮಹಿಳಾ ಮಂಡಳದ ನೂತನ ಪದಾಧಿಕಾರಿಗಳು ಸೇರಿದಂತೆ ಸಮಾಜ ಬಾಂಧವರು ಭಾಗವಹಿಸಿದ್ದರು.

# ದಾಖಲೆ ಬರೆದ ಧಾರವಾಡ ಕೃಷಿ ಮೇಳ: ನಾಲ್ಕೇ ದಿನದಲ್ಲಿ 23.7 ಲಕ್ಷ ಜನರ ಭೇಟಿ



**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಧಾರವಾಡದ ಕೃಷಿ ಮೇಳಕ್ಕೆ ಮಂಗಳವಾರ ತೆರೆಬಿದ್ದಿದ್ದು, ನಾಲ್ಕೇ ದಿನದಲ್ಲಿ 23.7 ಲಕ್ಷ ಜನರು ಭೇಟಿ ನೀಡಿದ್ದಾರೆ. ಜಿಲ್ಲೆಯಲ್ಲಿರುವ ಕೃಷಿ ವಿಶ್ವವಿದ್ಯಾಲಯದ ವತಿಯಿಂದ ಈ ಮೇಳ ಆಯೋಜನೆ ಮಾಡಲಾಗಿತ್ತು.

ಈ ವರ್ಷ ಸೆ.13ರಿಂದ ಸೆ.16ರವರೆಗೆ ಕೃಷಿ ಮೇಳ ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ದಾಖಲೆಯ ಜನರು ಭೇಟಿ ನೀಡಿದ್ದಾರೆ. ನಾಲ್ಕು ದಿನಗಳ ಕಾಲ ನಡೆದ ಈ ಕೃಷಿ ಮೇಳಕ್ಕೆ ಬರೋಬ್ಬರಿ 23.74 ಲಕ್ಷ ಜನ ಭೇಟಿ ನೀಡಿದ್ದರು.

ಮೊದಲ ದಿನ ಶನಿವಾರ (ಸೆ.13) 3.65 ಲಕ್ಷ ಜನ, ಎರಡನೇ ದಿನ ಭಾನುವಾರ (ಸೆ.14) 7.74 ಲಕ್ಷ, ಮೂರನೇ ದಿನ ಸೋಮವಾರ (ಸೆ.15) 8.6 ಲಕ್ಷ ಹಾಗೂ ಕೊನೆಯ ದಿನ ಮಂಗಳವಾರ (ಸೆ.16) 3.75 ಲಕ್ಷ ಜನ ಸೇರಿ ಒಟ್ಟು 23.74 ಲಕ್ಷ ಜನ ಕೃಷಿ ಮೇಳಕ್ಕೆ ಭೇಟಿ ನೀಡಿದ್ದಾರೆ.

## ಶಿಕ್ಷಕಿ ಜೈಬುನ್ನಿಸಾ ಅವರಿಗೆ ಒಲಿದ ಮುಂಡರಗಿ ತಾಲೂಕು ಮಟ್ಟದ ಉತ್ತಮ ಶಿಕ್ಷಕಿ ಪ್ರಶಸ್ತಿ

# ಮಕ್ಕಳ ಮೆಚ್ಚಿನ ಶಿಕ್ಷಕಿಗೆ ಪ್ರಶಸ್ತಿ

**■ವಿಜಯಸಾಕ್ಷಿ ಸುದ್ದಿ, ಡಂಬಳ**

ಸಹಾನುಭೂತಿ, ಪ್ರಾಮಾಣಿಕತೆ, ಶ್ರಮ ಮತ್ತು ನೈತಿಕ ಬದ್ಧತೆಯ ಮೂಲಕ ಪಾಠವನ್ನು ಸರಳ, ಸುಗಮ ಹಾಗೂ ಸ್ಫೂರ್ತಿದಾಯಕವಾಗಿ ಸಾವಿರಾರು ವಿದ್ಯಾರ್ಥಿಗಳಿಗೆ 24 ವರ್ಷಗಳಿಂದ ಹಿಂದಿ ವಿಷಯವನ್ನು ಬೋಧಿಸುತ್ತಾ ಬಂದಿರುವ ಜೈಬುನ್ನಿಸಾ ಉಮರಸಾಬ ನಮಾಜಿ (ಹಿರೇಹಾಳ) ಅವರ ಉತ್ತಮ ಸೇವೆಗೆ ಮುಂಡರಗಿ ತಾಲೂಕು ಮಟ್ಟದ ಉತ್ತಮ ಶಿಕ್ಷಕಿ ಪ್ರಶಸ್ತಿ ಲಭಿಸಿದೆ.




ತಂದೆ ಉಮರಸಾಬ-ತಾಯಿ ರಜಿಯಾಬೇಗಂ. ಹುಬ್ಬಳ್ಳಿಯಲ್ಲಿ ಹಿಂದಿ ವಿಷಯದಲ್ಲಿ ಬಿ.ಎಡ್, ಕುವೆಂಪು ವಿಶ್ವವಿದ್ಯಾಲಯದಲ್ಲಿ ಹಿಂದಿಯಲ್ಲಿ ಎಮ್.ಎ. ಶಿಕ್ಷಣ ಪಡೆದುಕೊಂಡರು. ಡಂಬಳ ಗ್ರಾಮದ ಉರ್ದು ಶಾಲೆಯ ಉತ್ತಮ ಶಿಕ್ಷಕರಾಗಿದ್ದ ಜೀವನಸಾಬ ಹಿರೇಹಾಳ ಅವರ ಕೈಹಿಡಿದರು. 2002ರಲ್ಲಿ ಮುಂಡಗೋಡದ ಮೊರಾರ್ಜಿ ವಸತಿ ಶಾಲೆ, ಗದಗ ನಗರದ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ, ಡಂಬಳ ಗ್ರಾಮದ ಕಿತ್ತೂರ ರಾಣಿ ಚನ್ನಮ್ಮ ವಸತಿ ಶಾಲೆಯಲ್ಲಿ ಸೇವೆ ಸಲ್ಲಿಸಿ, ಸದ್ಯ ಮುಂಡರಗಿ ನಗರದ ಪ್ರತಿಷ್ಠಿತ ಡಾ. ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಯ ಪ್ರಾಚಾರ್ಯರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಹಿಂದಿ ವಿಷಯದಲ್ಲಿ ಪ್ರತಿವರ್ಷ ಶೇ.100ರಷ್ಟು ಫಲಿತಾಂಶವನ್ನು ನೀಡಿದ ಹಿನ್ನೆಲೆಯಲ್ಲಿ ಅತ್ಯುತ್ತಮ ಶಿಕ್ಷಕಿ ಪ್ರಶಸ್ತಿ, ಗದಗ ಜಿಲ್ಲಾ ಹಿಂದಿ ವಿಷಯದಲ್ಲಿ ಉತ್ತಮ ಮಾರ್ಗದರ್ಶಕಿ ಪ್ರಶಸ್ತಿ, ಇತ್ತೀಚೆಗೆ ಮುಂಡರಗಿ ತಾಲೂಕು ಮಟ್ಟದ ಉತ್ತಮ ಶಿಕ್ಷಕಿ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

> ವಿದ್ಯಾರ್ಥಿಗಳು ತಮ್ಮನ್ನು ನಿರಂತರ ಜ್ಞಾನದೆಡೆಗೆ ತೊಡಗಿಸಿಕೊಂಡಾಗ ಪರಿಶ್ರಮದ ಫಲ ಉತ್ತಮವಾಗಿರುತ್ತದೆ. ಪರಿಶ್ರಮ, ತ್ಯಾಗ, ಹಾಗೂ ವಿದ್ಯಾರ್ಥಿಗಳ ಬದುಕನ್ನು ರೂಪಿಸುವಲ್ಲಿ ತೋರಿಸುವ ನಿಷ್ಠೆಯನ್ನು ಗುರುತಿಸಿ ಇಲಾಖೆ ಉತ್ತಮ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಿರುವದು ಸಂತೋಷ ತಂದಿದೆ.
>
> **– ಜೈಬುನ್ನಿಸಾ ಉ.ನಮಾಜಿ(ಹಿರೇಹಾಳ)**

> ಶಿಕ್ಷಕರೇ ಸಮಾಜದ ಶಿಲ್ಪಿಗಳು. ಅವರೇ ಹೊಸ ಪೀಳಿಗೆಯ ಕನಸುಗಳನ್ನು ರೂಪಿಸುವವರು. ಜ್ಞಾನ-ಮೌಲ್ಯಗಳನ್ನು ಬಿತ್ತುವವರು. ಆ ಹಿನ್ನೆಲೆಯಲ್ಲಿ ಶಿಕ್ಷಕಿಯಾಗಿ, ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸುತ್ತಿರುವ ಜೈಬುನ್ನಿಸಾ ನಮಾಜಿ ಅವರ ಉತ್ತಮ ಸೇವೆಯನ್ನು ಗುರುತಿಸಿ ತಾಲೂಕು ಮಟ್ಟದ ಉತ್ತಮ ಶಿಕ್ಷಕಿ ಪ್ರಶಸ್ತಿ ನೀಡಿ ಗೌರವಿಸಿರುವುದು ಪ್ರಶಂಸನೀಯ.
>
> **– ಗಂಗಾಧರ ಅಣ್ಣಿಗೇರಿ.**
> ಕ್ಷೇತ್ರ ಶಿಕ್ಷಣಾಧಿಕಾರಿ, ಮುಂಡರಗಿ.

# ಪೋಷಣ್ ಮಾಸಾಚರಣೆ ಕಾರ್ಯಕ್ರಮ



■ ವಿಜಯಸಾಕ್ಷಿ ಸುದ್ದಿ, ನರಗುಂದ

ನರಗುಂದ ಶಿಶು ಅಭಿವೃದ್ಧಿ ಯೋಜನೆ ವತಿಯಿಂದ ನರಗುಂದ ನಗರದ ದಂಡಾಪೂರ ಓಣಿಯ ಹನುಮಾನ ಮಂದಿರದಲ್ಲಿ ಪೋಷಣ್ ಮಾಸಾಚರಣೆ ಕಾರ್ಯಕ್ರಮ ನಡೆಯಿತು. ಹಿರಿಯರಾದ ನೀಲಮ್ಮ ಹಕಾರಿ ಸಭೆಯ ಅದ್ಯಕ್ಷತೆ ವಹಿಸಿದ್ದರು. ಮೇಲ್ವಿಚಾರಕಿ ಪರಿಮಳಾ ಹೂಗಾರ ಮಾತನಾಡಿ, ಅಪೌಷ್ಠಿಕತೆ ಹೋಗಲಾಡಿಸಲು ಪೌಷ್ಠಿಕ ಆಹಾರದಿಂದ ಮಾತ್ರ ಸಾಧ್ಯ. ಅಲ್ಲದೇ ವಾತಾವರಣಕ್ಕನುಸಾರವಾಗಿ ಸಿಗುವ ಆಹಾರ ಪದಾರ್ಥಗಳು, ಹಣ್ಣು, ಧಾನ್ಯಗಳ ಸರಿಯಾದ ಬಳಕೆ ಅವಶ್ಯಕ ಎಂದರು.

ಪೋಷಣ್ ಸಂಯೋಜಕರಾದ ಮಂಜುನಾಥ ಗುಗ್ಗರಿ ಮಾತನಾಡಿ, ಈ ವರ್ಷದ ಮಾಸಾಚರಣೆಯಲ್ಲಿ ವಿಶೇಷವಾಗಿ ಬೊಜ್ಜು ನಿವಾರಣೆ, ಸಕ್ಕರೆ, ಉಪ್ಪು ಮತ್ತು ಎಣ್ಣೆಯ ಸೇವನೆ ಕಡಿಮೆಗೊಳಿಸುವದು, ತಾಯಿಯ ಹೆಸರಲ್ಲಿ ಗಿಡ ನೆಡುವದು, ಪುರುಷರ ಸಹಭಾಗಿತ್ವ, ಮಕ್ಕಳ ಕಲಿಕೆಗೆ ಉತ್ತೇಜನ ನೀಡುವದು ಹೀಗೆ ಹಲವಾರು ಚಟುವಟಿಕೆಗಳ ಮೂಲಕ ಜರುಗಿಸಲಾಗುತ್ತಿದೆ ಎಂದು ತಿಳಿಸಿದರು.

ನಮ್ಮ ಕ್ಲಿನಿಕ್ ವೈದ್ಯಾಧಿಕಾರಿ ಬಾಸ್ಕರ ಪೊಲೀಸ್‌ಪಾಟೀಲ, ಅಂಗನವಾಡಿ ಕಾರ್ಯಕರ್ತೆಯರಾದ ಪಿ.ಆಯ್. ಹುಯಿಲಗೋಳ, ಬಿ.ಬಿ. ಗುರಿಕಾರ, ಕೆ.ಬಿ. ಪೂಜಾರ, ಎಸ್.ಎನ್. ಶಿರೋಳ, ಆರೋಗ್ಯ ಇಲಾಖೆ ಸಿಬ್ಬಂದಿಗಳಾದ ಎಸ್.ಜಿ. ಬಾಣಿ, ಭಾರತಿ ಮಾರಿಹಾಳ ಹಾಗೂ ಓಣಿಯ ಗರ್ಬಿಣಿ, ಬಾಣಂತಿ ಮಹಿಳೆಯರು, ಮಕ್ಕಳು ಭಾಗವಹಿಸಿದ್ದರು.

### ಜಿಲ್ಲಾಡಳಿತದಲ್ಲಿ ಹಮ್ಮಿಕೊಂಡಿದ್ದ ಶ್ರೀ ವಿಶ್ವಕರ್ಮ ಜಯಂತಿ ಕಾರ್ಯಕ್ರಮದಲ್ಲಿ ಡಾ.ದುರಗೇಶ್ ಕೆ.ಆರ್ ಅಭಿಮತ


# ಕಾಯಕ ನಿಷ್ಠೆಗೆ ಇನ್ನೊಂದು ಹೆಸರೇ ವಿಶ್ವಕರ್ಮ

■ ವಿಜಯಸಾಕ್ಷಿ ಸುದ್ದಿ, ಗದಗ

ದೇಶಕ್ಕೆ ವಿಶ್ವಕರ್ಮರ ಕೊಡುಗೆ ಅಪಾರವಾಗಿದೆ. ದೇಶದ ಬೆನ್ನೆಲುಬು ರೈತನಾದರೆ, ರೈತನಿಗೆ ಹೊಲದಲ್ಲಿ ಉಳುಮೆ ಮಾಡಲು ಉಪಯೋಗಿಸುವ ಸಲಕರಣೆಗಳನ್ನು ಪೂರೈಕೆ ಮಾಡುವವರು ವಿಶ್ವಕರ್ಮ ಸಮಾಜದವರಾಗಿದ್ದಾರೆ. ಭಾರತೀಯ ಸಂಸ್ಕೃತಿಯನ್ನು ಬೆಳೆಸಿದವರು ವಿಶ್ವಕರ್ಮರು. ದೇಶದಲ್ಲಿ ವಿವಿಧ ಐತಿಹಾಸಿಕ ದೇವಾಲಯಗಳನ್ನು ನಿರ್ಮಾಣ ಮಾಡಿದ ಹಿರಿಮೆ ವಿಶ್ವಕರ್ಮರಿಗೆ ಸಲ್ಲುತ್ತದೆ. ಎಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಬುಧವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಶ್ರೀ ವಿಶ್ವಕರ್ಮ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶ್ರಮ ಹಾಗೂ ಕಾಯಕ ನಿಷ್ಠೆಗೆ ಇನ್ನೊಂದು ಹೆಸರೇ ವಿಶ್ವಕರ್ಮರು. ವಿಶ್ವಕರ್ಮನೆಂಬುವನು ಇಲ್ಲದಿದ್ದರೆ ಈ ಜಗತ್ತಿಗೆ ಅಸ್ತಿತ್ವವೇ ಇರುತ್ತಿರಲಿಲ್ಲ. ಸಕಲ ವಿದ್ಯೆಗಳು ವಿಶ್ವಕರ್ಮನಿಂದಲೇ ಬಂದಿವೆ. ವೇದೋಪನಿಷತ್‌ಗಳು ಸಹ ವಿಶ್ವ ಕರ್ಮನನ್ನು ಕೊಂಡಾಡಿವೆ ಎಂದರು.



ರಾಜ ವಿಷ್ಣುವರ್ಧನನು ಹೊಯ್ಸಳ ಸಾಮ್ರಾಜ್ಯದ ಪ್ರಸಿದ್ಧ ರಾಜನಾಗಿದ್ದ. ಇವನ ರಾಣಿ ಶಾಂತಲೆಯು ಶಿಲ್ಪಕಲೆ ಹಾಗೂ ಸಂಸ್ಕೃತಿಯಲ್ಲಿ ಹೆಚ್ಚಿನ ಆಸಕ್ತಿಯುಳ್ಳವಳಾಗಿದ್ದಳು. ಬೇಲೂರಿನ ಚನ್ನಕೇಶವ ದೇವಾಲಯ, ಹಳೆಬೀಡಿನ ಹೊಯ್ಸಳೇಶ್ವರ ದೇವಾಲಯ ಸೇರಿದಂತೆ ವಿವಿಧ ದೇವಾಲಯಗಳ ನಿರ್ಮಾತೃ ವಿಶ್ವಕರ್ಮ ಸಮಾಜದ ಅಮರ ಶಿಲ್ಪಿ ಜಕಣಾಚಾರಿಯವರಾಗಿದ್ದಾರೆ. ಈಗಿನ ಮಕ್ಕಳಿಗೆ ವಿಶ್ವಕರ್ಮರ ಮಾರ್ಗದರ್ಶನ ತಿಳಿಸಬೇಕು ಹಾಗೂ ಸಾಹಿತ್ಯದ ಒಲವನ್ನು ಬೆಳೆಸಲು ಪ್ರೇರೇಪಿಸಬೇಕು. ಎಲ್ಲರೂ ಕಾಯಕ ತತ್ವ ಬೆಳೆಸಿಕೊಳ್ಳಬೇಕು ಎಂದರು.

ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ರಾಜ್ಯ ಸರ್ಕಾರದಿಂದ ವಿಶ್ವಕರ್ಮ ಜಯಂತಿ ಆಚರಿಸುತ್ತಿರುವುದು ಸಂತಸದ ವಿಚಾರ. ಯಾವುದೇ ಸಾಧನೆಯಾಗಬೇಕಾದರೆ ಸಂಘಟನೆಯು ಬಹಳ ಮುಖ್ಯವಾಗಿರುತ್ತದೆ. ವಿಶ್ವಕರ್ಮ ಸಮಾಜದವರು ಒಗ್ಗಟ್ಟಾಗಿ ಮುಂದೆ ಬರಬೇಕು. ಸರ್ಕಾರದ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಸಾಹಿತಿ ಗೋಪಾಲ ಬಡಿಗೇರ ಅವರು ರಚಿಸಿದ 'ಶ್ರೀ ವಿಶ್ವಕರ್ಮ ಸ್ತುತಿಮಾಲಾ' ಪುಸ್ತಕವನ್ನು ಬಿಡುಗಡೆ ಮಾಡಲಾಯಿತು. ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು ಹಾಗೂ ವಿವಿಧ ಕ್ಷೇತ್ರಗಳ ಸಾಧಕರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ವಿಶ್ವಕರ್ಮ ಸಮಾಜದ ಅಧ್ಯಕ್ಷ ದೇವೇಂದ್ರಪ್ಪ ಬಡಿಗೇರ, ವಿಶ್ವಕರ್ಮ ನೌಕರರ ಸಂಘದ ಅಧ್ಯಕ್ಷ ಆರ್.ಡಿ. ಕಡ್ಲಿಕೊಪ್ಪ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಕಾರ್ಮಿಕ ಇಲಾಖೆಯ ಅಧಿಕಾರಿ ಶ್ರೈಶೈಲ ಸೋಮನಕಟ್ಟಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್. ಎಸ್. ಬುರುಡಿ, ವಾರ್ತಾಧಿಕಾರಿ ವಸಂತ ಮಡ್ಲೂರ, ಶ್ರೀಧರ್ ಚಿನಗಡಿ, ಹರಿನಾಥಬಾಬು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ವಿಶ್ವಕರ್ಮ ಸಮುದಾಯದ ಗಣ್ಯರು, ಹಿರಿಯರು ಹಾಜರಿದ್ದರು.

ಸುತಾರ ತಂಡದವರು ನಾಡಗೀತೆ ಪ್ರಸ್ತುತಪಡಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸ್ವಾಗತಿಸಿದರು. ವಿಶ್ವನಾಥ ಕಮ್ಮಾರ ಕಾರ್ಯಕ್ರಮ ನಿರೂಪಿಸಿದರು.

ಹಿರಿಯ ಸಾಹಿತಿ ಡಿ.ವಿ. ಬಡಿಗೇರ ಉಪನ್ಯಾಸ ನೀಡಿ, ರಾಜ್ಯ ಸರ್ಕಾರದ ಅದೇಶದನ್ವಯ ವಿಶ್ವಕರ್ಮ ಜಯಂತಿಯನ್ನು ಅರ್ಥಪೂರ್ಣವಾಗಿ, ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ. ಎಲ್ಲಿ ಶ್ರಮದ ಬೆವರ ಹನಿ ಇದೆಯೋ, ಅಲ್ಲಿ ನಾನು ಇದ್ದೇನೆ ಎಂದು ವಿಶ್ವ ಕರ್ಮರು ಹೇಳುತ್ತಾರೆ. ವಿಶ್ವಕರ್ಮರು ಶ್ರಮ ಪ್ರಿಯರು, ಕಾಯಕ ಪ್ರಿಯರಾಗಿದ್ದಾರೆ. ವೇದ, ಪುರಾಣ, ಶೃತಿ-ಸ್ಮೃತಿಗಳಲ್ಲಿ ಸರ್ವಜ್ಞರ ವಚನಗಳಲ್ಲಿಯೂ ಸಹ ವಿಶ್ವ ಕರ್ಮರ ಪ್ರಾಮುಖ್ಯತೆ ಬಗ್ಗೆ ಉಲ್ಲೇಖಿಸಲಾಗಿದೆ. ವಿಶ್ವ ಕರ್ಮನಿಲ್ಲದ ಜಗತ್ತು ಶೂನ್ಯ. ಸಕಲ ವಿದ್ಯೆಗಳು ವಿಶ್ವಕರ್ಮನಿಂದಲೇ ಬಂದಿವೆ. ವಿಶ್ವ ಕರ್ಮನಿಲ್ಲದಿದ್ದರೆ ಜಗತ್ತಿನ ಅಸ್ತಿತ್ವ ಇರುತ್ತಿರಲಿಲ್ಲ ಎಂದು ಸಂತ ಕವಿ ವೇಮನರು ತಿಳಿಸಿದ್ದಾರೆ. ಸಕಲ ಚರಾಚರ ವಸ್ತುಗಳಲ್ಲಿ ವಿಶ್ವಕರ್ಮ ಇದ್ದಾನೆ. ವಿಶ್ವಕರ್ಮರು ಕಾಯಕ ಯೋಗಿಗಳು ಎಂದು ವಿವರಿಸಿದರು.

# 'ಏಕತಾ ಸಮಾವೇಶ' ನಾಳೆ




■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರ ನಡೆಸುತ್ತಿರುವ ಜಾತಿ ಜನಗಣತಿಯು ಸಮಾಜದಲ್ಲಿ ಗೊಂದಲ ಮೂಡಿಸುತ್ತಿದೆ. ಈ ಗೊಂದಲಗಳ ವಿರುದ್ಧ ಹೋರಾಟ ನಡೆಸುವ ಭಾಗವಾಗಿ ವೀರಶೈವ, ಲಿಂಗಾಯತ ಮಹಾಸಭಾದ ವತಿಯಿಂದ ಸೆಪ್ಟೆಂಬರ್ 19ರಂದು ಹುಬ್ಬಳ್ಳಿಯ ನೆಹರು ಮೈದಾನದಲ್ಲಿ 'ಏಕತಾ ಸಮಾವೇಶ' ಆಯೋಜಿಸಲಾಗಿದೆ ಎಂದು ಜಿಲ್ಲಾಧ್ಯಕ್ಷ ರಾಜು ಗುಡಿಮನಿ ತಿಳಿಸಿದರು.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮೀಕ್ಷೆಯ ಸಂದರ್ಭದಲ್ಲಿ ಜಾತಿ ಕಾಲಂನಲ್ಲಿ 'ವೀರಶೈವ ಲಿಂಗಾಯತ' ಎಂದು ನಮೂದಿಸುವಂತೆ ನಿರ್ಣಯ ಕೈಗೊಳ್ಳಲಾಗಿದೆ. ಈ ವಿಷಯವನ್ನು ಸಮಾವೇಶದ ಮೂಲಕ ಎಲ್ಲರಿಗೂ ತಿಳಿಸಲಾಗುವುದು ಎಂದರು.

ಹುಬ್ಬಳ್ಳಿಯಲ್ಲಿ ನಡೆಯುವ ಸಮಾವೇಶದಲ್ಲಿ ಗದಗ ಜಿಲ್ಲೆಯಿಂದ ಸುಮಾರು 15 ಸಾವಿರ ಜನ ಭಾಗವಹಿಸಲು ವ್ಯವಸ್ಥೆ ಮಾಡಲಾಗಿದೆ. ಇದರೊಂದಿಗೆ ಸಾಕಷ್ಟು ಭಕ್ತರು ಸ್ವಂತ ವಾಹನಗಳಲ್ಲಿಯೂ ತೆರಳಲಿದ್ದಾರೆ ಎಂದು ಹೇಳಿದರು.

ಹೊಸಳ್ಳಿ ಬೂದೀಶ್ವರ ಮಠದ ಅಭಿನವ ಬೂದೀಶ್ವರ ಶ್ರೀಗಳು ಮಾತನಾಡಿ, ಸರ್ಕಾರ ಜಾತಿಗಳ ಆಧಾರದ ಮೇಲೆ ಉಪಜಾತಿಗಳನ್ನು ಸೃಷ್ಟಿಸುತ್ತಿರುವುದು ನೋವಿನ ಸಂಗತಿ. ಸರ್ಕಾರದ ಈ ಕ್ರಮವನ್ನು ನಾವು ಖಂಡಿಸುತ್ತೇವೆ. ಜಾತಿ ಗಣತಿಯ ವಿರುದ್ಧ ನಡೆಯುತ್ತಿರುವ 'ವೀರಶೈವ ಏಕತಾ ಸಮಾವೇಶ' ಒಂದು ಐತಿಹಾಸಿಕ ನಿರ್ಣಯವಾಗಲಿದೆ. ಲಿಂಗಾಯತ ಮತ್ತು ವೀರಶೈವ ಬೇರೆ ಎಂಬ ಗೊಂದಲ ಸೃಷ್ಟಿಸಲಾಗುತ್ತಿದೆ. ಇದಕ್ಕೆ ಭಕ್ತರು ಅವಕಾಶ ಕೊಡಬಾರದು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ವೀರಶೈವ ಲಿಂಗಾಯತ ಮಹಾಸಭಾದ ಮುರುಘರಾಜ ಬಡ್ನಿ, ರಾಜ್ಯ ಉಪಾಧ್ಯಕ್ಷೆ ವಿಜಯಲಕ್ಷ್ಮೀ ಮಾನ್ವಿ, ವಿಜಯಕುಮಾರ ಗಡ್ಡಿ, ಬಸವರಾಜ ಅಂಗಡಿ, ಸುರೇಖಾ ಪಿಳ್ಳಿ ಮುಂತಾದವರು ಉಪಸ್ಥಿತರಿದ್ದರು.

# ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆಯ ವ್ಯಾಪ್ತಿಯಲ್ಲಿ ಬರುವ ಈ ಸೇವಾ ಸಂಘ/ಸಂಸ್ಥೆಗಳಿಗೆ ವಾರ್ಡ್ ನಂ. 22 ರಲ್ಲಿರುವ ಗಂಗಿಮಡಿ ಆಶ್ರಯ ಕಾಲೋನಿಯಲ್ಲಿ ಇರುವ ನಗರಸಭೆಯ ಮಾಲೀಕತ್ವದ ಆಶ್ರಯ ನಿವೇಶನದಲ್ಲಿ ನಾಗರಿಕ ಸೌಲಭ್ಯ ಉದ್ದೇಶಕ್ಕಾಗಿ ಮೀಸಲಿರಿಸಿದ ಖಾಲಿ ನಿವೇಶನಗಳನ್ನು 30ವರ್ಷಗಳ ಅವಧಿಗೆ ಲೀಜ್ ನೀಡುವುದರ ಕುರಿತಾಗಿ ಈ ಕೆಳಗೆ ನಮೂದಿಸಿರುವ ಸಂಘ ಸಂಸ್ಥೆ ಇವುಗಳಿಗೆ ನಿವೇಶನಗಳನ್ನು ಕೋರಿ ಮನವಿ ಸಲ್ಲಿಸಿದ್ದರ ಮೇರೆಗೆ ದಿನಾಂಕ:27-05-2025 ರಂದು ಜರುಗಿದ ಆಶ್ರಯ ಸಮಿತಿ ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಆಶ್ರಯ ಸಮಿತಿ ಗದಗ-ಬೆಟಗೇರಿ ನಗರಸಭೆ ಹಾಗೂ ಶಾಸಕರು ಗದಗ ವಿಧಾನಸಭಾ ಕ್ಷೇತ್ರ ರವರು ಸ್ವೀಕರಿಸಿದ ನಡಾವಳಿಯಂತೆ ಈ ಕೆಳಗಿನಂತೆ ಇರುವ ನಿವೇಶನಗಳನ್ನು ಲೀಜ್ ನೀಡಲು ನಿರ್ಣಯಿಸಿದ್ದು ಇರುತ್ತದೆ.

ಸಂಘ/ಸಂಸ್ಥೆ ಹೆಸರು; ಗಂಗಿಮಡಿ ಆಶ್ರಯ ಕಾಲೋನಿ ಶ್ರೀ ಮಾರುತಿ ಸೇವಾ ಟ್ರಸ್ಟ್ ಕಮಿಟಿ (ರಿ)ರಿ.ಸ.ನಂ385,395,396,398 ನೇದ್ದರ ಪೈಕಿ ಗಂಗಿಮಡಿ ಆಶ್ರಯ ಕಾಲೋನಿ ಮಸ್ಜಿದ್-ಎ-ಮುಹಾಜರೀನ ಸೇವಾ ಕಮಿಟಿ, ರಿ.ಸ.ನಂ385,395,396ನೇದ್ದನ್ನು ರಿ.ಸ.ನಂ/ಟಿ.ಪಿ.ಸಿ ನಂ/ಪ್ಲಾಟ್ ನಂ ಗಂಗಿಮಡಿ ಆಶ್ರಯ ಕಾಲೋನಿ ಈಶ್ವರ ಸೇವಾ ಸಮಿತಿ(ರಿ) ರಿ.ಸ.ನಂ385,395,396,398 ನೇದ್ದರ ಪೈಕಿ ಈ ಸೇವಾ ಸಂಘ/ಸಂಸ್ಥೆಗಳಿಗೆ ನಗರದ ವಿವಿಧ ವಾರ್ಡ್‌ಗಳಲ್ಲಿ ನಗರಸಭೆಯ ಮಾಲೀಕತ್ವದ ವಿವಿಧ ನಾಗರಿಕ ಸೌಲಭ್ಯ ಉದ್ದೇಶಕ್ಕಾಗಿ ಮೀಸಲಿರಿಸಿದ ಖಾಲಿ ನಿವೇಶನಗಳನ್ನು 30 ವರ್ಷಗಳ ಅವಧಿಗೆ ಲೀಜ್ ನೀಡಲು ಯಾವುದಾದರೂ ತಂಟೆ ವ ತಕರಾರು ಇದ್ದಲ್ಲಿ ಪೌರಾಯುಕ್ತರು ಗದಗ-ಬೆಟಗೇರಿ ನಗರಸಭೆ ಇವರ ಹೆಸರಿನಲ್ಲಿ ಈ ಕಾರ್ಯಾಲಯಕ್ಕೆ ಲಿಖಿತವಾಗಿ ಸೂಕ್ತ ದಾಖಲೆಗಳೊಂದಿಗೆ ಪ್ರಕಟಣೆ ಹೊರಡಿಸಿದ ದಿನದಿಂದ 07 ದಿನದೊಳಗಾಗಿ ಸಲ್ಲಿಸಲು ತಿಳಿಸಿದೆ.

ಅವಧಿ ಮೀರಿ ಬಂದ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾರ್ ಸರ್ವಿಸ್ ಟೆಕ್ನಿಶಿಯನ್ ತರಬೇತಿ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಂತ್ರಿಕ ಕೌಶಲ್ಯ ತರಬೇತಿಗಳಿಗೆ ಹೆಸರಾದ ಹುಬ್ಬಳ್ಳಿಯ ಜಿಟಿಟಿಸಿ ಮಲ್ಟಿ ಸ್ಕಿಲ್ ಡೆವಲಪ್‌ಮೆಂಟ್ ಸೆಂಟರ್‌ನಲ್ಲಿ ಬೆಂಗಳೂರಿನ ಬಾಷ್ ಇಂಡಿಯಾ ಪ್ರತಿಷ್ಠಾನದ ಸಹಯೋಗದಲ್ಲಿ 3 ತಿಂಗಳ ಕಾರ್ ಸರ್ವಿಸ್ ಟೆಕ್ನಿಶಿಯನ್ ತರಬೇತಿಯನ್ನು ಆಯೋಜಿಸಲಾಗಿದೆ.

ಹತ್ತನೇ ತರಗತಿ ಪಾಸ್, ಪಿಯುಸಿ/ಡಿಪ್ಲೋಮಾ ಯಾವುದೇ ಡಿಗ್ರೀ ಉತ್ತೀರ್ಣ ಅಥವಾ ಅನುತ್ತೀರ್ಣರಾದ 18 ರಿಂದ 28 ವಯೋಮಿತಿಯೊಳಗಿನ ಅಭ್ಯರ್ಥಿಗಳು ಈ ತರಬೇತಿ ಪ್ರವೇಶ ಪಡೆಯಲು ಅರ್ಹರಿರುತ್ತಾರೆ. ಅಭ್ಯರ್ಥಿಗಳಿಗೆ ವಾಹನ ವ್ಯವಸ್ಥೆ, ಅಧ್ಯಯನ, ಕಾರ್ ವಾಹನದ ತಪಾಸಣೆ, ದುರಸ್ತಿ, ನಿರ್ವಹಣೆ, ಬಿಡಿ ಭಾಗಗಳ ಜೋಡಣೆ, ಉಪಕರಣಗಳ ಬಳಕೆ, ಸಂವಹನ, ವ್ಯಕ್ತಿತ್ವ ವಿಕಸನ, ಮತ್ತು ಕಂಪ್ಯೂಟರ್ ತರಬೇತಿ ನೀಡಲಾಗುವುದು. ಈ ತರಬೇತಿಗಳು ಕೈಗಾರಿಕೆಗಳ ಅವಶ್ಯಕತೆಗಳಿಗೆ ಅನುಗುಣವಾದ ಪಠ್ಯಕ್ರಮವನ್ನು ಹೊಂದಿವೆ. ಮತ್ತು ಕೈಗಾರಿಕೆಗಳಲ್ಲಿ ಅನುಭವ ಹೊಂದಿದ ಆಟೋಮೊಬೈಲ್ ಉದ್ಯಮ ಪರಿಣಿತರಿಂದ ತರಬೇತಿ ನೀಡಲಾಗುತ್ತದೆ.

ತರಬೇತಿಗಳು ಅಕ್ಟೋಬರ 01 ರಿಂದ ಪ್ರಾರಂಭವಾಗಲಿವೆ. ಜಿಟಿಟಿಸಿ ಹುಬ್ಬಳ್ಳಿ ಕೇಂದ್ರದಲ್ಲಿ ಉನ್ನತ ತಂತ್ರಜ್ಞಾನ ಮತ್ತು ತರಬೇತಿ ಸೌಲಭ್ಯಗಳನ್ನು ಸ್ಥಾಪಿಸಲಾಗಿದ್ದು, ತರಬೇತಿ ಪೂರ್ಣಗೊಳಿಸುವ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಿ, ಕ್ಯಾಂಪಸ್ ಸಂದರ್ಶನಗಳ ಮೂಲಕ ಉದ್ಯೋಗ ದೊರಕಿಸಿ ಕೊಡಲಾಗುತ್ತದೆ. ಆಸಕ್ತ ಅಭ್ಯರ್ಥಿಗಳು ದಿ. 30.09.2025 ರ ಒಳಗಾಗಿ ಖುದ್ದಾಗಿ ಜಿಟಿಟಿಸಿ ಹುಬ್ಬಳ್ಳಿ ಕೇಂದ್ರಕ್ಕೆ ಭೇಟಿ ನೀಡಿ ಪ್ರವೇಶ ಪಡೆಯಲು ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ, ಜಿಟಿಟಿಸಿ, ಇಂಡಸ್ಟ್ರಿಯಲ್ ಎಸ್ಟೇಟ್, ಗೋಕುಲ ರಸ್ತೆ, ಹುಬ್ಬಳ್ಳಿ. ದೂರವಾಣಿ: 0836-2333159/ 8183860552 ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

# ಸಶಕ್ತ ಭಾರತ ನಿರ್ಮಿಸೋಣ

▶▶ ಮೊದಲನೇ ಪುಟದಿಂದ

ಸರ್ಕಾರದ ಸೌಲಭ್ಯದಿಂದ ವಂಚಿತವಾಗಬಾರದು ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿ ಡಾ. ದುರಗೇಶ ಕೆ.ಆರ್ ಮಾತನಾಡಿ, ಕೇಂದ್ರ ಸರ್ಕಾರ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಜಿಲ್ಲೆಯ ಫಲಾನುಭವಿಗಳು ಈ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು.

ರಾಷ್ಟ್ರೀಯ ಇಂದಿರಾ ಗಾಂಧಿ ಯೋಜನೆ, ರಾಷ್ಟ್ರೀಯ ಭದ್ರತಾ ಯೋಜನೆ ಸೇರಿದಂತೆ ಅಂಕವೀಕಲರಿಗೆ, ವಯೋವೃದ್ಧರಿಗೆ ಅನೇಕ ಯೋಜನೆಗಳು ಇದ್ದು, ರಾಜ್ಯ ಹಾಗೂ ಕೇಂದ್ರ ಸರ್ಕಾರದ ಯೋಜನೆಗಳು ಜಿಲ್ಲಾಡಳಿತದ ಮೂಲಕ ನೇರವಾಗಿ ಫಲಾನುಭವಿಗಳಿಗೆ ತಲುಪುತ್ತಿವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಕ್ಬರಸಾಬ ಬಬರ್ಚಿ, ತಹಸೀಲ್ದಾರ್ ಶ್ರೀನಿವಾಸ ಮೂರ್ತಿ ಕುಲಕರ್ಣಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಕೆ. ಮಹಾಂತೇಶ ಮುಂತಾದವರು ಇದ್ದರು.

# ಲಿಂ. ಪಂಚಾಕ್ಷರ ಶಿವಾಚಾರ್ಯ ಸ್ವಾಮೀಜಿಯ ಅಮೃತ ಶಿಲಾಮೂರ್ತಿ ಕೊಡುಗೆಯಾಗಿ ನೀಡಿದ ನಬಿಸಾಹೇಬ !

■ ವಿಜಯಸಾಕ್ಷಿ ಸುದ್ದಿ, ಅಣ್ಣಿಗೇರಿ

ಪಂಡಿತ ಪುಟ್ಟರಾಜ ಗವಾಯಿಗಳ ಕ್ರಿಯಾಮೂರ್ತಿಗಳು, ಅಡ್ನೂರ - ರಾಜೂರು - ಗದಗ ಬ್ರಹನ್ಮಠದ ಲಿಂಗೈಕ್ಯ ಪಂಚಾಕ್ಷರ ಶಿವಾಚಾರ್ಯ ಸ್ವಾಮೀಜಿಯ, 2 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿದ ಅಮೃತ ಶಿಲಾಮೂರ್ತಿಯನ್ನು ಶ್ರೀಮಠದ ಕಲ್ಮೇಶ್ವರ ಪ್ರೌಢಶಾಲೆಯ ಶಿಕ್ಷಕ, ಅಣ್ಣಿಗೇರಿ ತಾಲೂಕು ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಬಿಸಾಹೇಬ ಯಲಬುರ್ಗಿ ಕೊಡುಗೆಯಾಗಿ



ನೀಡುವ ಮೂಲಕ ತಮ್ಮ ಗುರುಭಕ್ತಿಯ ಜೊತೆಗೆ ಭಾವೈಕ್ಯತೆ ಮೆರೆದಿದ್ದಾರೆ.

ಇದೇ ಸೆಪ್ಟಂಬರ್ 19 ಶುಕ್ರವಾರ ಕೊಪ್ಪಳ ಜಿಲ್ಲೆ ಕುಕನೂರು ತಾಲೂಕಿನ ರಾಜೂರು ಗ್ರಾಮದಲ್ಲಿ ನಾಡಿನ



ವಿವಿಧ ಮಠಾಧೀಶರ ಸಮ್ಮುಖದಲ್ಲಿ ಪ್ರತಿಷ್ಠಾಪನೆಗೊಳ್ಳಲಿರುವ ಶಿಲಾಮಂಟಪದಲ್ಲಿ ಶ್ರೀಗಳ ಅಮೃತ ಶಿಲಾಮೂರ್ತಿ ಲೋಕಾರ್ಪಣೆಗೊಳ್ಳಲಿದೆ.

### ವಿಶ್ವಕರ್ಮ ದಿನಾಚರಣೆ ಕಾರ್ಯಕ್ರಮದಲಿ ತಹಸೀಲಾರ ಧನಂಜಯ ಎಂ

# ವಿಶ್ವಕರ್ಮರು ನಾಗರಿಕತೆಯ ಬೆಳವಣಿಗೆಗೆ ಕಾರಣರು



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಂಚ ಶ್ರೇಷ್ಠ ಕುಲಕಸುಬುಗಳ ಮೂಲಕ ಜಗತ್ತಿನ ಜನರ ಬೇಡಿಕೆಗಳನ್ನು ಪೂರೈಸುತ್ತ ಕಾಯಕವೇ ಕೈಲಾಸ ಎಂಬ ಬಸವಣ್ಣನವರ ತತ್ವದಡಿ ಬದುಕುವ ವಿಶ್ವಕರ್ಮರು ನಾಗರಿಕತೆಯ ಬೆಳವಣಿಗೆಗೆ ಕಾರಣರಾಗಿದ್ದಾರೆ ಎಂದು ತಹಸೀಲ್ದಾರ ಧನಂಜಯ ಎಂ ಅಭಿಪ್ರಾಯಪಟ್ಟರು.

ಪಟ್ಟಣದ ತಹಸೀಲ್ದಾರರ ಕಚೇರಿಯಲ್ಲಿ ಬುಧವಾರ ತಾಲೂಕಾಡಳಿತ ಮತ್ತು ತಾಲೂಕಾ ವಿಶ್ವಕರ್ಮ ಸಮಾಜದ ಆಶ್ರಯದಲ್ಲಿ ವಿಶ್ವಕರ್ಮ ದಿನ ಆಚರಣೆಯಲ್ಲಿ ಭಾಗವಹಿಸಿ ಮಾತನಾಡಿದರು.

ವಿಶ್ವಕರ್ಮ ಸಮಾಜದ ತಾಲೂಕಾಧ್ಯಕ್ಷ ಈರಣ್ಣ ಬಡಿಗೇರ ಮತ್ತು ಕಾರ್ಯದರ್ಶಿ ಭಾಸ್ಕರ ಸೊರಟೂರ ಮಾತನಾಡಿ, ಪ್ರಸ್ತುತ ತಾಂತ್ರಿಕತೆಯ ಪ್ರಭಾವದಿಂದ ವಿಶ್ವಕರ್ಮ ಸಮಾಜದ ಕುಲಕಸುಬುಗಳಿಗೆ ಸಾಕಷ್ಟು ಪೆಟ್ಟು ಬಿದ್ದಿದೆ. ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಎಲ್ಲ ಕ್ಷೇತ್ರದಲ್ಲೂ ಹಿಂದುಳಿದಿರುವ ಸಮಾಜದ ಶ್ರೇಯೋಭಿವೃದ್ಧಿಗಾಗಿ ಸರ್ಕಾರ ಗಮನ ಹರಿಸಬೇಕು.

ಯಳವತ್ತಿ ಗ್ರಾಮದವರಾದ ಮಾದೇವಪ್ಪ ಬಡಿಗೇರ ಮತ್ತು ಇಂದ್ರಾ ಬಡಿಗೇರ ಅವರಿಗೆ ಸಮಾಜದ ವತಿಯಿಂದ ಭಗವಾನ್ ವಿಶ್ವಕರ್ಮ ಪ್ರಶಸ್ತಿಯನ್ನು ನೀಡುತ್ತಿರುವದು ವೀರಯೋಧ ದಿ.ರಾಘವೇಂದ್ರ ಅವರಿಗೆ ಸಮಾಜದಿಂದ ಸಲ್ಲಿಸುವ ಗೌರವಾಗಿದೆ ಎಂದರು.

ಸಮಾಜದ ಉಪಾಧ್ಯಕ್ಷ ರಾಮಚಂದ್ರ ಬಡಿಗೇರ, ಮನೋಹರ್ ಪತ್ತಾರ, ಲಕ್ಷ್ಮೇಶ್ವರ ಅಧ್ಯಕ್ಷ ಮೋಹನ್ ಸುತಾರ, ಅಶೋಕ ಸೊರಟೂರ, ಹೂವಪ್ಪ ಸೊರಟೂರ, ಜಯಣ್ಣ ಬೋರ್ಗಾಂಕರ್, ಪ್ರೇಮಕ್ಕ ಬಡಿಗೇರ, ಶಶಿಕಲಾ ಬಡಿಗೇರ, ಮೌನೇಶ ಬಾಲೆಹೊಸೂರ, ಗಂಗಾಧರ ಬಾಲೆಹೊಸೂರ, ದ್ಯಾಮಣ್ಣ ಬಡಿಗೇರ, ದೇವಿಂದ್ರಪ್ಪ ಬಾಲೆಹೊಸೂರ, ಗಣಪತಿ ಹುಲಬಜಾರ, ರವಿ ಸುತಾರ, ಶಿವಾನಂದ ಬಡಿಗೇರ, ಅಪ್ಪಣ್ಣ ಸೊರಟೂರ, ಶ್ರೀಕಾಂತ್ ಪತ್ತಾರ, ಪ್ರಸನ್ನ ಬೆಂತೂರ, ಅಶೋಕ ಬಹದ್ದೂರ್‌ಬಂಡಿ, ರಮೇಶ್ ಬಡಿಗೇರ, ಗಣೇಶ ಬಡಿಗೇರ, ಮಾಂತೇಶ ಬಡಿಗೇರ, ತಹಸೀಲ್ದಾರ ಕಚೇರಿ ಸಿಬ್ಬಂದಿಗಳು, ಸಮಾಜ ಬಾಂಧವರು ಇದ್ದರು.

ವಿಶ್ವಕರ್ಮ ಎಂಬುದು ವ್ಯಕ್ತಿಯಾಗಿರದೇ ಅದು ದೈವೀ ಶಕ್ತಿಯಾಗಿದೆ. ಪ್ರಗತಿಶೀಲ ಸಮಾಜಕ್ಕೆ ವಿಶ್ವಕರ್ಮ ಸಮಾಜ ಬಾಂಧವರ ಕೊಡುಗೆ ಅಪಾರ. ಅವರನ್ನು ಜಾತಿ, ಧರ್ಮ ಮೀರಿ ಕಲಾರಾಧಕರಾಗಿ ಗೌರವಿಸುವುದು ಸಮಾಜದ ಕೆಲಸವಾಗಿದೆ. ವಿಶ್ವಕರ್ಮ ಸಮಾಜದ ಯುವಕ ದಿ ರಾಘವೇಂದ್ರ ಬಡಿಗೇರ ಕಾರ್ಗಿಲ್ ಯುದ್ಧದಲ್ಲಿ ವೀರಮರಣವನ್ನು ಹೊಂದಿದ್ದನು.

ಅಂತಹ ವೀರಯೋಧನನನ್ನು ನಾಡಿಗೆ ನೀಡಿದ ವಿಶ್ವಕರ್ಮ ಸಮಾಜದ ಹಿರಿಯರಾದ ಮಾದೇವಪ್ಪ ಬಡಿಗೇರ, ತಾಯಿ ಇಂದ್ರಾ ಅವರುಗಳಿಗೆ ಗೌರವ ನಮನಗಳನ್ನು ಸಲ್ಲಿಸುವದಾಗಿ ತಹಸೀಲ್ದಾರರು ಹೇಳಿದರು.

# ಲಕ್ಕುಂಡಿಯಲ್ಲಿ ವಿಶ್ವಕರ್ಮ ಜಯಂತ್ಯುತ್ಸವ



■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ರೈತ ಸಮುದಾಯದ ಕೃಷಿ ಚಟುವಟಿಕೆಗೆ ಅತ್ಯಂತ ಹತ್ತಿರವಾಗಿರುವ ವಿಶ್ವಕರ್ಮರ ಕೊಡುಗೆ ಪ್ರಶಂಶನೀಯವಾಗಿದೆ ಎಂದು ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಹೇಳಿದರು.

ಇಲ್ಲಿಯ ಕಾಳಿಕಾ ದೇವಸ್ಥಾನದ ಆವರಣದಲ್ಲಿ ಕಾಳಿಕಾ ಕಮ್ಮಟೇಶ್ವರ ಸೇವಾ ಟ್ರಸ್ಟ್ ಕಮಿಟಿಯು ಹಮ್ಮಿಕೊಂಡಿದ್ದ 4ನೇ ವರ್ಷದ ವಿಶ್ವಕರ್ಮ ಜಯಂತ್ಯುತ್ಸವ ಕಾರ್ಯಕ್ರಮದ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಕಾಳಿಕಾ ದೇವಿಯ ಆಶೀರ್ವಾದ ಪಡೆದ ವಿಶ್ವಕರ್ಮ ಸಮುದಾಯವು ಗ್ರಾಮದ ವಿವಿಧ ಕೈಗಾರಿಕೆಗಳಿಗೆ ಸಲಕರಣೆಗಳನ್ನು ನಿರ್ಮಿಸಿಕೊಟ್ಟು ಅವರ ಬದುಕಿಗೆ ಆಸರೆಯಾಗಿದ್ದಾರೆ. ಕಳೆದ ವರ್ಷ ಬೇಡಿಕೆಯಿಟ್ಟಿದ್ದ ದೇವಸ್ಥಾನದ ಪಕ್ಕಕ್ಕೆ ಇರುವ ಹೆಚ್ಚಿನ ನಿವೇಶನವನ್ನು ಗ್ರಾಮ ಪಂಚಾಯಿತಿಯು ನೀಡಿದ್ದು, ಶಾಸಕರು ಅನುದಾನ ನೀಡಿ ಕಟ್ಟಡ ನಿರ್ಮಿಸಿದ್ದು ಸಂತಸ ತಂದಿದೆ ಎಂದರು.

ನಿವೃತ್ತ ಶಿಕ್ಷಕ ವಿ.ಆಯ್. ಬಡಿಗೇರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ದ್ವಾರಕ ಪಟ್ಟಣ, ಶ್ರೀಲಂಕಾ ಪಟ್ಟಣವನ್ನು ನಿರ್ಮಾಣ ಮಾಡಿದವರು ವಿಶ್ವಕರ್ಮರು. ರಾವಣನಿಗೆ ಪುಷ್ಪಕ ವಿಮಾನವನ್ನು ಸಹ ಅಂದಿನ ಕಾಲದಲ್ಲಿಯೇ ನಿರ್ಮಿಸಿಕೊಟ್ಟ ಇವರು ಜಗತ್ತಿನ ಎಲ್ಲ ವಸ್ತುಗಳ ನಿರ್ಮಾತೃರು ಎಂದರು.

ನಿವೃತ್ತ ಶಿಕ್ಷಕ ಅಶೋಕ ಬೂದಿಹಾಳ ಮಾತನಾಡಿ, ವಿಶ್ವಕರ್ಮರ ಕೌಶಲ್ಯವು ಗ್ರಾಮದ ಪ್ರತಿಯೊಂದು ಕಟುಂಬಕ್ಕೂ ಸಹಾಕಾರಿಯಾಗಿದ್ದು, ಆರಾಧ್ಯದೈವ ವಿಶ್ವಕರ್ಮರ ಜಯಂತಿ ಆಚರಿಸುತ್ತಿರುವುದು ಶ್ಲಾಘನೀಯ ಎಂದರು. ಕಮಲಾಕರ ಪತ್ತಾರ ಮಾತನಾಡಿದರು. ದೇವಸ್ಥಾನಕ್ಕೆ ದೇಣಿಗೆ ನೀಡಿದ ಮಹನೀಯರನ್ನು ಸನ್ಮಾನಿಸಲಾಯಿತು. ಗ್ರಾಮದ ಪ್ರಮುಖ ಬೀದಿಯಲ್ಲಿ ವಿಶ್ವಕರ್ಮರ ಭಾವಚಿತ್ರ ಮೆರವಣಿಗೆಯು ಕೃಷ್ಣ ಯುವಕ ಸಂಘದ ಜಾಂಜ್ ಮೇಳದೊಂದಿಗೆ ಜರುಗಿತು. ಕಾಳಿಕಾ ಕಮ್ಮಟೇಶ್ವರ ಸೇವಾ ಟ್ರಸ್ಟ್ ಅಧ್ಯಕ್ಷ ಚಂದ್ರಶೇಖರ ಪತ್ತಾರ ಅಧ್ಯಕ್ಷತೆ ವಹಿಸಿದ್ದರು.

ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಟ್ರಸ್ಟ್ ಉಪಾಧ್ಯಕ್ಷ ಈರಣ್ಣ ಕಂಚಗಾರ, ಗದಗ ಜಿಲ್ಲಾ ವಿಶ್ವಕರ್ಮ ಮಹಾಸಭಾ ಅಧ್ಯಕ್ಷ ದೇವೇಂದ್ರಪ್ಪ ಬಡಿಗೇರ, ಈರಣ್ಣ ಹಲವಾಗಲಿ, ದೇವೇಂದ್ರಪ್ಪ ಬಡಿಗೇರ, ಕುಬೇರಪ್ಪ ಕಮ್ಮಾರ, ಸುಮಾ ಬಡಿಗೇರ, ಶಾಂತಮ್ಮ ಬಡಿಗೇರ ವೇದಿಕೆಯಲ್ಲಿದ್ದರು. ದೇವೇಂದ್ರಪ್ಪ ಬಡಿಗೇರ ಸ್ವಾಗತಿಸಿದರು. ಪ್ರಕಾಶ ಅರಹುಣಶಿ ನಿರೂಪಿಸಿದರು. ಲಕ್ಷ್ಮೀ ಮೌನೇಶ ಬಡಿಗೇರ ವಂದಿಸಿದರು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಉಚ್ಚ ನ್ಯಾಯಾಲಯ, ಧಾರವಾಡ/ ಬೆಂಗಳೂರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು / ಬೆಳಗಾವಿ ನ್ಯಾಯಾಲಯಗಳಲ್ಲಿ ಜಿಲ್ಲಾ ಪಂಚಾಯತಿ ಅಧ್ಯಕ್ಷರು ಅಧಿಕಾರಿಗಳನ್ನು ಎದುರುದಾರರನ್ನಾಗಿಸಿ ದಾಖಲಾಗುವ ರಿಟ್ ಅರ್ಜಿಗಳನ್ನು ನಿರ್ವಹಿಸಲು ಆಯಾ ನ್ಯಾಯಾಲಯಗಳಲ್ಲಿ ಖಾಯಂ ಸದಸ್ಯ ನೋಂದಣಿಯಾಗಿರುವ, ಜಿಲ್ಲಾ ಪಂಚಾಯತಿ ಹಾಗೂ ಇತರೆ ವಿವಿಧ ಕಚೇರಿಗಳ ಪರವಾಗಿ ನ್ಯಾಯವಾದಿಗಳಾಗಿ ಕಾರ್ಯನಿರ್ವಹಿಸಿದ ಹಾಗೂ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಕ್ಕೆ ಸಂಬಂಧಿಸಿದ ಪ್ರಕರಣಗಳಲ್ಲಿ ಜಿಲ್ಲಾ ಪಂಚಾಯತ್ , ತಾಲೂಕು ಪಂಚಾಯತ್, ಹಾಗೂ ಗ್ರಾಮ ಪಂಚಾಯತಿ ಪರವಾಗಿ ಪ್ರಕರಣಗಳನ್ನು ನಿರ್ವಹಿಸಿದ ಬಗ್ಗೆ ಕನಿಷ್ಠ 5 ವರ್ಷಗಳ ಅನುಭವ ಹೊಂದಿರುವ ವಕೀಲರನ್ನು ನೇಮಿಸಿಕೊಳ್ಳುವ ಕುರಿತು ನ್ಯಾಯವಾದಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿದಾರರು ತಮ್ಮ ಹೆಸರು, ವಯಸ್ಸು, ವಿದ್ಯಾರ್ಹತೆ, ಅನುಭವ, ವಿವಿಧ ಕಚೇರಿಗಳ ಪರವಾಗಿ ನ್ಯಾಯವಾದಿಗಳಾಗಿ ಕಾರ್ಯನಿರ್ವಹಿಸಿದ ವಿವರದ ಕುರಿತು ಆಯಾ ಕಚೇರಿಯಿಂದ ಪಡೆದ ಪ್ರಮಾಣ ಪತ್ರ ಸಲ್ಲಿಸಬೇಕು. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ ಹಾಗೂ ಗ್ರಾಮ ಪಂಚಾಯತ್ /ತಾಲೂಕು ಪಂಚಾಯತ್/ ಜಿಲ್ಲಾ ಪಂಚಾಯತ್‌ಗಳಿಗೆ ಸಂಬಂಧಿಸಿದ ಪ್ರಕರಣಗಳಲ್ಲಿ ವಾದ ಮಂಡಿಸಿದ ಬಗ್ಗೆ ವಿವರ ಸಲ್ಲಿಸಬೇಕು. ಕನಿಷ್ಠ 10 ರಿಂದ 15 ವರ್ಷ ನ್ಯಾಯಾಲಯದ ಕಾರ್ಯಕಲಾಪಗಳಲ್ಲಿ ಕಾರ್ಯನಿರ್ವಹಿಸಿದ ಅನುಭವ ಹೊಂದಿದ ಬಗ್ಗೆ ಸೂಕ್ತ ಪ್ರಾಧಿಕಾರದಿಂದ ಪಡೆದ ಪ್ರಮಾಣಪತ್ರ ಅಥವಾ ನೋಂದಣಿ ಪ್ರಮಾಣ ಪತ್ರ ಸಲ್ಲಿಸುವುದು.

ಆಸಕ್ತ ನ್ಯಾಯವಾದಿಗಳು ತಮ್ಮ ಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿ ಅರ್ಜಿಯನ್ನು ಜಿಲ್ಲಾ ಪಂಚಾಯತಿ ಕಾರ್ಯಾಲಯಕ್ಕೆ ಸೆಪ್ಟೆಂಬರ್ 26 ರೊಳಗೆ ಸಲ್ಲಿಸಬೇಕು. ಮಾಹಿತಿಯನ್ನು zpgadag.karnataka.gov.in ನಲ್ಲಿ ವೀಕ್ಷಿಸಬಹುದಾಗಿದೆ ಎಂದು ಗದಗ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪಿಎಂಎಫ್‌ಎಂಇ ಜಿಲ್ಲಾ ಮಟ್ಟದ ಅರಿವು ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್

# ಆತ್ಮ ನಿರ್ಭರ ಯೋಜನೆಯ ಲಾಭ ಪಡೆಯಿರಿ

■ವಿಜಯಸಾಕ್ಷಿ ಸುದ್ದಿ, ಗದಗ

ಆತ್ಮನಿರ್ಭರ ಭಾರತ ಅಭಿಯಾನ ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ (ಪಿಎಂಎಫ್‌ಎಂಇ) ಯೋಜನೆಯು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಸೇರಿ ನೀಡುವ ಸಹಾಯಧನ ಯೋಜನೆಯಾಗಿದೆ. ಹೊಸ ಆಹಾರ ಸಂಸ್ಕರಣಾ ಉದ್ದಿಮೆ ಪ್ರಾರಂಭಿಸಲು ಹಾಗೂ ಚಾಲ್ತಿಯಲ್ಲಿರುವ ಉದ್ದಿಮೆಗಳನ್ನು ವಿಸ್ತರಿಸಲು ಅವಕಾಶವಿದೆ. ಬ್ಯಾಂಕ್ ಸಾಲದೊಂದಿಗೆ ಶೇ.50ರಷ್ಟು ಸಹಾಯಧನ, ಗರಿಷ್ಠ 15 ಲಕ್ಷಗಳವರೆಗೆ ಸಹಾಯಧನವಿದ್ದು ಸಾರ್ವಜನಿಕರು ಇದರ ಸದುಪಯೋಗ ಪಡೆಯುವಂತೆ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ತಿಳಿಸಿದರು.

ಗದಗ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ, ಕೃಷಿ ತಂತ್ರಜ್ಞಾನ ನಿರ್ವಹಣಾ ಸಂಸ್ಥೆ (ಆತ್ಮ), ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ಮತ್ತು ಕೆಪೆಕ್ ಲಿಮಿಟೆಡ್ ಬೆಂಗಳೂರು ಇವರ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಪಿಎಂಎಫ್‌ಎಂಇ ಜಿಲ್ಲಾ ಮಟ್ಟದ ಅರಿವು ಮೂಡಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.




ರೈತರು ಆರ್ಥಿಕವಾಗಿ ಸಬಲರಾಗಬೇಕಾದರೆ ಕೃಷಿ ವಿಶ್ವ ವಿದ್ಯಾಲಯದ ಹಾಗೂ ಕೃಷಿ ಇಲಾಖೆಯ ಮಾರ್ಗದರ್ಶನ ಪಡೆದುಕೊಳ್ಳುವುದು ಮುಖ್ಯವಾಗಿದೆ. ಆತ್ಮ ನಿರ್ಭರ ಯೋಜನೆಯ ಲಾಭವನ್ನು ಎಲ್ಲ ಅರ್ಹ ಫಲಾನುಭವಿಗಳು ಪಡೆದುಕೊಳ್ಳಬೇಕು. ಬೇಕರಿ ಉದ್ದಿಮೆ, ಖಾರದ ಪುಡಿ ತಯಾರಿಕೆ, ಹೊಸ ಆಹಾರ ಸಂಸ್ಕರಣಾ ಉದ್ದಿಮೆಗಳನ್ನು ಪ್ರಾರಂಭಿಸಲು ಪ್ರೊಜೆಕ್ಟ್ ತಯಾರಿಸಿ ಕೃಷಿ ಇಲಾಖೆಗೆ ಸಲ್ಲಿಸಿದಾಗ ಸೂಕ್ತ ಮಾರ್ಗದರ್ಶನದಿಂದ ಆರ್ಥಿಕವಾಗಿ ಸಬಲರಾಗಲು ಸಾಧ್ಯವಾಗುತ್ತದೆ. ಈ ಕಾರ್ಯಾಗಾರದ ಸದುಪಯೋಗವನ್ನು ಎಲ್ಲರೂ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ರೈತರಿಗೆ ಅಭಿನಂದನಾ ಪತ್ರ, ಉದ್ದಿಮೆದಾರರಿಗೆ ಸಾಲ ಮಂಜೂರಾತಿ ಪತ್ರಗಳನ್ನು ವಿತರಿಸಲಾಯಿತು. ಪಿಎಂಎಫ್‌ಎಂಇ ಯೋಜನೆಯ ಫಲಾನುಭವಿಗಳ ಯಶಸ್ಸಿನ ಕುರಿತು ಕಿರುಚಿತ್ರ ಪ್ರದರ್ಶನ ಜರುಗಿತು. ಉದ್ದಿಮೆದಾರರಾದ ಮುಳಗುಂದದ ರಾಜೇಶ್ವರಿ ಬಡ್ನಿ, ವಾಸುದೇವ ಇಲ್ಲೂರು ಹಾಗೂ ಇತರರು ತಮ್ಮ ಅನುಭವಗಳನ್ನು ಕಾರ್ಯಕ್ರಮದಲ್ಲಿ ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ಕೃಷಿಕ ಸಮಾಜದ ಉಪಾಧ್ಯಕ್ಷ ಹೂವಣ್ಣವರ, ಜಿಲ್ಲಾ ಕೃಷಿಕ ಸಮಾಜದ ರಾಜ್ಯ ಪ್ರತಿನಿಧಿ ಅರಹುಣಸಿ, ಜಿಲ್ಲಾ ಕೃಷಿಕ ಸಮಾಜ ಅಧ್ಯಕ್ಷ ವೀರೇಂದ್ರ ಪಾಟೀಲ, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಸಂತೋಷ ಎಂ, ಕೆಪೆಕ್ ಸಂಸ್ಥೆಯ ವಿಘ್ನೇಶ, ಪಶು ಸಂಗೋಪನಾ ಇಲಾಖೆಯ ಉಪನಿರ್ದೇಶಕ ಹುಲಗಣ್ಣವರ, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಶಶಿಕಾಂತ ಕೋಟಿಮನಿ, ಜಿಲ್ಲಾ ನೌಕರರ ಸಂಘದ ಅಧ್ಯಕ್ಷ ಬಸವರಾಜ ಬಳ್ಳಾರಿ, ವಾರ್ತಾಧಿಕಾರಿ ವಸಂತ ಮಡ್ಲೂರ, ಕೃಷಿ ವಿಜ್ಞಾನ ಕೇಂದ್ರದ ವಿನಾಯಕ ಸೇರಿದಂತೆ ಕೃಷಿ ಇಲಾಖೆಯ ಉಪನಿರ್ದೇಶಕರು, ಸಹಾಯಕ ಕೃಷಿ ನಿರ್ದೇಶಕರು, ಅಧಿಕಾರಿಗಳು ಹಾಜರಿದ್ದರು.

ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಜಿ.ಎಚ್ ಸ್ವಾಗತಿಸಿದರು. ಸಹಾಯಕ ಕೃಷಿ ನಿರ್ದೇಶಕಿ ಸೀಮಾ ಸವಣೂರ ಕಾರ್ಯಕ್ರಮ ನಿರೂಪಿಸಿದರು. ಉಪ ಕೃಷಿ ನಿರ್ದೇಶಕಿ ಸ್ಫೂರ್ತಿ ಜಿ.ಎಸ್. ಪ್ರಾಸ್ತಾವಿಕವಾಗಿ ಮಾತನಾಡಿದರು.

> ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಮಾತನಾಡಿ, ಪಿಎಂಎಫ್‌ಎಂಇ ಒಂದು ಉಪಯುಕ್ತವಾದ ಯೋಜನೆಯಾಗಿದೆ. ಫಲಾನುಭವಿಗಳಿಗೆ ಸಾಲ ನೀಡುವಲ್ಲಿ ಬ್ಯಾಂಕ್‌ಗಳು ಸಹಕರಿಸುತ್ತವೆ. ಬೇಡಿಕೆಗನುಸಾರವಾಗಿ ರೈತರು ಬೆಳೆ ಬೆಳೆದು ಮಾರುಕಟ್ಟೆಗೆ ಅವಕಾಶ ಕಲ್ಪಿಸಬೇಕಾಗಿದೆ ಎಂದರು.

# ಮೋದಿ ಪ್ರಾಮಾಣಿಕ ಆಡಳಿತಗಾರರು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇಶದ ಸರ್ವತೋಮುಖ ಪ್ರಗತಿಗಾಗಿ ಹಗಲಿರುಳು ನಿಸ್ವಾರ್ಥ ಸೇವೆ ಮಾಡುತ್ತಾ ದೇಶವನ್ನು ಬಲಿಷ್ಠ, ಸ್ವಾವಲಂಬಿಯಾಗಿಸಲು ಸಮರ್ಪಿಸಿಕೊಂಡಿರುವ ನರೇಂದ್ರ ಮೋದಿ ಅವರಂತಹ ಶ್ರೇಷ್ಠ ಪ್ರಧಾನಿ ದೊರೆತಿರುವುದು ನಮ್ಮ ದೇಶದ ಜನರ ಸೌಭಾಗ್ಯ ಮತ್ತು ಹೆಮ್ಮೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಬುಧವಾರ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಬಿಜೆಪಿ ಶಿರಹಟ್ಟಿ ಮಂಡಳದಿಂದ ನರೇಂದ್ರ ಮೋದಿ ಅವರ 75ನೇ ಜನ್ಮ ದಿನಾಚರಣೆಗೆ ಅಂಗವಾಗಿ ಸೇವಾ ಪಾಕ್ಷಿಕ ಕಾರ್ಯಕ್ರಮದಡಿ ರಕ್ತದಾನ ಮತ್ತು ಆರೋಗ್ಯ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಮೋದಿ ಅವರು ಅಖಂಡ ಭಾರತದ ಕಲ್ಪನೆ ಸಾಕಾರಗೊಳಿಸಿ ಬಿ.ಆರ್. ಅಂಬೇಡ್ಕರ್ ಕಂಡ ಸಂವಿಧಾನ ಸಾಕಾರಗೊಳಿಸಿದ್ದಾರೆ. ಜಗತ್ತು ಕಂಡ ಅಪ್ರತಿಮ, ದಕ್ಷ, ಪ್ರಾಮಾಣಿಕ ಆಡಳಿತಗಾರರಾಗಿದ್ದಾರೆ. ದೇವರು ಮೋದಿಜಿ ಅವರಿಗೆ ಆಯುರಾರೋಗ್ಯ ಕರುಣಿಸಲೆಂದು, ಅವರಿಂದ ದೇಶ ಸೇವೆ ಮುಂದುವರೆಯಲೆಂದು ಪ್ರಾರ್ಥಿಸೋಣ. ರಕ್ತದಾನ ಅತ್ಯಂತ ಶ್ರೇಷ್ಠವಾಗಿದ್ದು, ಆರೋಗ್ಯಕರ ಜೀವನಕ್ಕೆ ಸಹಾಯಕವಾಗಲಿದೆ. ಎಲ್ಲರೂ ರಕ್ತದಾನ ಮಾಡುವಲ್ಲಿ ಮುಂದಾಗಬೇಕು ಎಂದರು ಹೇಳಿದರು.

ಬಿಜೆಪಿ ಮಂಡಲ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ನಿಂಗಪ್ಪ ಬನ್ನಿ, ಮಾದೇವಪ್ಪ ಅಣ್ಣಿಗೇರಿ, ಅಶ್ವಿನಿ ಅಂಕಲಕೋಟಿ, ಪಿ.ಬಿ ಖರಾಟೆ, ವಿಜಯ ಹತ್ತಿಕಾಳ, ವಿಜಯ ಮೆಕ್ಕಿ, ಅಶೋಕ ಶಿರಹಟ್ಟಿ, ಜಿಮ್ಸ್‌ನ ಡಾ. ಶ್ವೇತಾ ಪಾಟೀಲ, ತಾಲೂಕಾ ವೈದ್ಯಾಧಿಕಾರಿ ಡಾ. ಸುಭಾಸ ದಾಯಗೊಂಡ, ಡಾ. ಶ್ರೀಕಾಂತ ಕಾಟೇವಾಲೆ, ಪರಶುರಾಮ ಇಮ್ಮಡಿ, ಜಗದೀಶಗೌಡ ಪಾಟೀಲ, ಎಂ.ಆರ್. ಪಾಟೀಲ, ರಮೇಶ ದನದಮನಿ, ವಿಜಯ ಕುಂಬಾರ, ಈರಣ್ಣ ಅಕ್ಕೂರ, ಪ್ರವೀಣ ಬೋಮಲೆ, ನೀಲಪ್ಪ ಹತ್ತಿ, ಮಂಜನಗೌಡ ಕೆಂಚನಗೌಡ, ಸಂತೋಷ ಜಾವೂರ, ಶಿವಪ್ಪ ಲಮಾಣಿ, ತಾವರೆಪ್ಪ ಲಮಾಣಿ, ಪ್ರಕಾರ್ಯದರ್ಶಿ ಅನಿಲ ಮುಳಗುಂದ, ನವೀನ ಹಿರೇಮಠ, ಗಂಗಾಧರ ಮೆಣಸಿನಕಾಯಿ ಸೇರಿದಂತೆ ನೂರಾರು ಕಾರ್ಯಕರ್ತರು ಪಾಲ್ಗೊಂಡಿದ್ದರು.

# ಸಮಾಜ ಒಡೆಯುವುದರ ವಿರುದ್ಧ ಒಗ್ಗಟ್ಟು ಪ್ರದರ್ಶಿಸಲು ಏಕತಾ ಸಮಾವೇಶ; ಬೊಮ್ಮಾಯಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಮೀಕ್ಷೆ ಹೆಸರಿನಲ್ಲಿ ರಾಜ್ಯ ಸರ್ಕಾರ ವೀರಶೈವ ಲಿಂಗಾಯತ ಸಮಾಜ ಒಡೆಯುವುದರ ವಿರುದ್ಧ ಒಗ್ಗಟ್ಟು ಪ್ರದರ್ಶಿಸಲು ಸ್ವಾಮೀಜಿಗಳ ಮುಂದಾಳತ್ವದಲ್ಲಿ ಹುಬ್ಬಳ್ಳಿಯಲ್ಲಿ ಏಕತಾ ಸಮಾವೇಶ ನಡೆಯುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.




ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಏಕತಾ ಸಮಾವೇಶಕ್ಕೆ ಸ್ವಾಮೀಜಿಗಳು ಮುಂದಾಳತ್ವ ವಹಿಸಿದ್ದಾರೆ. ಅದಕ್ಕೆ ಅಖಿಲ ಭಾರತ ವೀರಶೈವ ಮಹಾಸಭಾ ಕೈಜೋಡಿಸಿದೆ. ನಾನು ವೀರಶೈವ ಮಹಾಸಭಾ ಜೊತೆಗೆ ಮಾತನಾಡುತ್ತಿದ್ದೇನೆ. ಸಮಾಜದಲ್ಲಿ ಒಡೆಯುವ ರಣತಂತ್ರ ಸರ್ಕಾರ ಮಾಡುತ್ತಿದೆ. ಸರ್ಕಾರದ ವಿರುದ್ಧ ಇಡೀ ಸಮಾಜ ಒಂದುಗೂಡಿಸುವುದು ಸಮಾವೇಶದ ಉದ್ದೇಶ ಎಂದು ಹೇಳಿದರು. ರಾಜ್ಯ ಸರ್ಕಾರ ಕ್ರಿಶ್ಚಿಯನ್ ಅಂತಾ ಎಲ್ಲಾ ಜಾತಿಯಲ್ಲಿ ಉಲ್ಲೇಖ ಮಾಡಿದೆ. ಲಿಂಗಾಯತರು, ಬ್ರಾಹ್ಮಣರು, ಒಕ್ಕಲಿಗರು, ಎಸಿ ಎಸ್ಟಿ, ಒಬಿಸಿಯನ್ನು ಬಿಟ್ಟಿಲ್ಲ. ಯಾವುದೇ ಸಮೀಕ್ಷೆಯಲ್ಲಿ ಮತಾಂತರಕ್ಕೆ ಬೇರೆ ಕೋಡ್ ಇಲ್ಲ. ಆದರೆ, ಈವಾಗ ಯಾರು ಹುಟ್ಟು ಹಾಕಿದ್ದಾರೊ ಗೊತ್ತಿಲ್ಲ. ಕಾಂತರಾಜು ಕಮಿಟಿ ಏನು ಸಂವಿಧಾನದ ಪ್ರಕಾರ ಆಗಿತ್ತಾ, ಸಿದ್ದರಾಮಯ್ಯನವರೇ ಕಾಂತರಾಜು ಕಮಿಟಿ ಮಾಡಿದ್ದು ಅದೇನು ದೊಡ್ಡ ಸ್ಯಾಂಟಿಟಿನಾ ಎಂದು ಪ್ರಶ್ನಿಸಿದರು.

ಸಮಾಜದಲ್ಲಿ ಬೇರೆ ಜಾತಿಯಲ್ಲಿ ಉಪಜಾತಿಗಳನ್ನು ಸೃಷ್ಟಿ ಮಾಡಿದ್ದಾರೆ. ವೀರಶೈವ ಲಿಂಗಾಯತ, ಲಿಂಗಾಯತ ವೀರಶೈವ ಅಂತಾ ಮಾಡಿದ್ದಾರೆ. ಹೀಗಾದರೆ ಹೇಗೆ ಅದಕ್ಕೆ ಅರ್ಥ ವಿದೆಯಾ ? ಇಂತಹ ನೂರಾರು ಉದಾಹರಣೆಗಳು ಆಗಿವೆ. ಎಲ್ಲಾ ಸಮಾಜದಲ್ಲಿ ಗೊಂದಲ ಹಿಡಿಸಿದ್ದಾರೆ. ಸಮಾಜವನ್ನು ಒಡೆದು ಚೂರು ಚೂರು ಮಾಡಿದ್ದಾರೆ. ಇದೊಂದು ಕೇವಲ ಹೈಕಮಾಂಡ್ ಒಲೈಸುವಂತಹ ರಾಜಕೀಯ ನಿರ್ಧಾರವನ್ನು ಸಿದ್ದರಾಮಯ್ಯ ಮಾಡಿದ್ದಾರೆ. ಇದನ್ನೆಲ್ಲ ನೋಡಿದರೆ ವಿನಾಶ ಕಾಲ ವಿಪರೀತ ಬುದ್ದಿ ಅನಿಸುತ್ತದೆ ಎಂದು ಹೇಳಿದರು. ರಾಜ್ಯ ಸರ್ಕಾರಕ್ಕೆ ಮನೆ ಮನೆಗೆ ಹೋಗಿ ಗಣತಿ ಮಾಡುವ ಅಧಿಕಾರ ಇಲ್ಲ. ಸೆನ್ಸಸ್ ಆಕ್ಟ್ ಇದೆ. ಕೇಂದ್ರ ಸರ್ಕಾರಕ್ಕೆ ಗಣತಿ ಮಾಡುವ ಅಧಿಕಾರ ಇದೆ. ಇದರಿಂದ ಗೊಂದಲ ಉಂಟಾಗಿದೆ. ಗೊಂದಲ ನಿವಾರಣೆ ಮಾಡಿ. ಕಾನೂನು ಬದ್ಧವಾಗಿ ಮಾಡುವವರೆಗೂ ಗೊಂದಲ ಇದ್ದೆ ಇರುತ್ತದೆ. ಕೇಂದ್ರ ಸರ್ಕಾರ ಜನಗಣತಿ ಜೊತೆಗೆ ಜಾತಿ ಗಣತಿ ಮಾಡುವುದಾಗಿ ಈಗಾಗಲೇ ಹೇಳಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ ಸೇರಿದಂತೆ ಅನೇಕ ಮುಖಂಡರಿದ್ದರು.

ಗದಗ ನಗರಕ್ಕೆ ಆಗಮಿಸಿದ ಮರಾಠಾ ಸಮಾಜದ ರಾಷ್ಟ್ರೀಯ ಮುಖಂಡರಾದ ಪಿ.ಜಿ.ಆರ್. ಸಿಂಧ್ಯಾ ಅವರನ್ನು ಮರಾಠಾ ವಿದ್ಯಾವರ್ಧಕ ಸಂಘ ಗದಗ, ಕರ್ನಾಟಕ ಕ್ಷತ್ರಿಯ ಮರಾಠಾ ಪರಿಷತ್ ಗದಗ, ಮಾತೋಶ್ರೀ ರಾಜಮಾತಾ ಜಿಜಾವು ಸ್ವಸಹಾಯ ಸಂಘದ ಪದಾಧಿಕಾರಿಗಳು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಮರಾಠಾ ವಿದ್ಯಾವರ್ಧಕ ಸಂಘದ ಜಿಲ್ಲಾಧ್ಯಕ್ಷ ಅರುಣಕುಮಾರ ಚವ್ಹಾಣ, ಕರ್ನಾಟಕ ಕ್ಷತ್ರಿಯ ಮರಾಠಾ ಪರಿಷತ್ ಜಿಲ್ಲಾಧ್ಯಕ್ಷ ಡಾ. ರಾಜೀವ ರೋಖಡೆ, ನಗರಸಭೆಯ ಪೌರಾಯುಕ್ತ ರಾಜಾರಾಮ ಪವಾರ ಉಪಸ್ಥಿತರಿದ್ದರು.



## 2025-26 ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಕಾನೂನು ಪದವೀಧರರಿಗೆ ತರಬೇತಿಗಾಗಿ ಆಯ್ಕೆ ಕುರಿತು ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಹಿಂದುಳಿದ ವರ್ಗಗಳ ಕಾನೂನು ಪದವೀಧರರಿಗೆ ತರಬೇತಿಗೆ ಆಯ್ಕೆ ಮಾಡಬೇಕಾಗಿದ್ದು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಹಾಗೂ ಅರ್ಹ ಹಿಂದುಳಿದ ವರ್ಗಗಳ ಕಾನೂನು ಪದವೀಧರರಿಗೆ ಭರ್ತಿ ಮಾಡಿದ ಅರ್ಜಿಯನ್ನು ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳಿಗೆ ಅಕ್ಟೋಬರ್ 15 ರಂದು ಸಂಜೆ 5 ಗಂಟೆಯೊಳಗಾಗಿ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಜಿಲ್ಲಾ ಆಡಳಿತ ಭವನ, ಕೊಠಡಿ ಸಂಖ್ಯೆ 208, ಹುಬ್ಬಳ್ಳಿ ರಸ್ತೆ, ಗದಗ ಇವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

# ಗೌರವಾನ್ವಿತ ಶಿಕ್ಷಕರು ನಮಗೆಲ್ಲ ಮಾರ್ಗದರ್ಶಿಗಳು




■ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಣದಿಂದ ಮಕ್ಕಳಲ್ಲಿ ಜ್ಞಾನ ಉಂಟಾದರೆ, ಶಿಕ್ಷಕರಿಂದ ಅರಿವು ಮೂಡುತ್ತದೆ. ಸಮಾಜದಲ್ಲಿ ಪೂಜ್ಯನೀಯವಾಗಿ ಗೌರವಿಸಲ್ಪಡುವ ಶಿಕ್ಷಕರು ನಮಗೆ ಮಾರ್ಗದರ್ಶಕರು ಎಂದು ಗದಗ ಜಿಲ್ಲಾ ಜೆಂಟ್ಸ್ ಗ್ರುಪ್ ಆಫ್ ಸಖಿ ಸಹೇಲಿ ಸಂಘಟನೆಯ ಅಧ್ಯಕ್ಷೆ ಸುಮಾ ಪಾಟೀಲ ಹೇಳಿದರು.

ಅವರು ಸಂಘಟನೆಯ ವತಿಯಿಂದ ಜರುಗಿದ ಶಿಕ್ಷಕರ ದಿನಾಚರಣೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಶಿಕ್ಷಕರನ್ನು ನಾವು ಗೌರವಿಸಬೇಕು. ಅದರಲ್ಲೂ ಅಂಗವಿಕಲ ಮಕ್ಕಳಿಗಾಗಿ ಸದಾ ಶ್ರಮಿಸುವ ಶಿಕ್ಷಕರ ಪರಿಶ್ರಮ ಮೆಚ್ಚುವಂತದ್ದು ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಸಂಪನ್ಮೂಲ ಶಿಕ್ಷಕಿ ಕವಿತಾ ದಂಡಿನ, ಅಂಗವಿಕಲ ಮಕ್ಕಳನ್ನು ಸಾಕಿ ಸಲಹುವ ತಂದೆ-ತಾಯಿಗಳು ಮೊದಲ ಗುರುಗಳು. ಈ ಮಕ್ಕಳನ್ನು ಮುಖ್ಯವಾಹಿನಿಗೆ ತರುವಲ್ಲಿ ಪಾಲಕರೊಂದಿಗೆ ಶಿಕ್ಷಕರು, ಸಮಾಜ, ಸಂಘಟನೆಗಳು ಕೈಜೋಡಿಸಬೇಕು. ಅದು ನಮ್ಮೆಲ್ಲರ ಕರ್ತವ್ಯವಾಗಿದೆ. ಅದಕ್ಕಾಗಿ ಸರ್ಕಾರದ ಉಚಿತ ಯೋಜನೆಗಳೊಂದಿಗೆ ದಾನಿಗಳಿಂದ ಸಹಾಯ-ಸಹಕಾರ ಪಡೆದು ಮಕ್ಕಳಿಗೆ ತಲುಪಿಸುವ ಕಾರ್ಯ ನಿರಂತರ ನಡೆದಿದೆ ಎಂದರು.

ರೇಖಾ ರೊಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿ, ಅಂಗವಿಕಲತೆಯನ್ನು ಮೆಟ್ಟಿನಿಂತು ಸಾಧನೆಗೈದವರು ಇದ್ದಾರೆ. ಬಾಲ್ಯದಿಂದಲೇ ಇಂತಹ ಮಕ್ಕಳಿಗೆ ಉತ್ತಮ ತರಬೇತಿ, ವೈದ್ಯಕೀಯ ಸಲಹೆ ಪಡೆದರೆ ಅವರೂ ಸಾಮಾನ್ಯರಂತೆ ಆಗಬಲ್ಲರು ಎಂದರು.


ಕಾರ್ಯದರ್ಶಿ ಅಶ್ವಿನಿ ಮಾದಗುಂಡಿ ಪ್ರಾರ್ಥಿಸಿದರು. ಚಂದ್ರಕಲಾ ಸ್ಥಾವರಮಠ ನಿರೂಪಿಸಿದರು. ಸುಷ್ಮಿತಾ ವೆರ್ಣೆಕರ ಪರಿಚಯಿಸಿದರು. ನಿರ್ಮಲಾ ಪಾಟೀಲ ವಂದಿಸಿದರು. ಮಧು ಕರಬಿಷ್ಠಿ, ಸುಗ್ಗಲಾ ಯಳಮಲಿ, ಪ್ರಿಯಾಂಕಾ ಹಳ್ಳಿ, ಶ್ರೀದೇವಿ ಮಹೇಂದ್ರಕರ, ವಿದ್ಯಾ ಶಿವನಗುತ್ತಿ, ಶೋಭಾ ಹಿರೇಮಠ, ಹೇಮಾ ಪೊಂಗಾಲಿಯಾ ಮುಂತಾದವರಿದ್ದರು.

### ಗದಗ ಜಿಲ್ಲೆಯಲ್ಲಿ 3740 ಪ್ರಕರಣಗಳು ರಾಜೀ ಸಂಧಾನದ ಮೂಲಕ ಇತ್ಯರ್ಥ

# ಯಶಸ್ವಿಯಾದ ಲೋಕ ಅದಾಲತ್

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ವೋಚ್ಛ ನ್ಯಾಯಾಲಯ ನವದೆಹಲಿ, ಕರ್ನಾಟಕ ಉಚ್ಛ ನ್ಯಾಯಾಲಯ ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ಆದೇಶದನ್ವಯ ರಾಜ್ಯಾದ್ಯಂತ ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಂಡಿದ್ದು, ಗದುಗಿನಲ್ಲಿ ಸೆ. 13ರಂದು ನಡೆದ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಒಟ್ಟು 13 ಬೆಂಚ್‌ಗಳನ್ನು ರಚಿಸಿ ರಾಜೀ ಸಂಧಾನಕ್ಕೆ ಆಯ್ಕೆ ಮಾಡಿಕೊಳ್ಳಲಾಗಿತ್ತು. ಅದರಲ್ಲಿ ನ್ಯಾಯಾಲಯದಲ್ಲಿರುವ 3740 ಚಾಲ್ತಿ ಪ್ರಕರಣಗಳನ್ನು ರಾಜೀ ಮೂಲಕ ಇತ್ಯರ್ಥಪಡಿಸಲಾಗಿದೆ ಹಾಗೂ 28486 ವ್ಯಾಜ್ಯ ಪೂರ್ವ ಪ್ರಕರಣಗಳನ್ನು ರಾಜೀ ಮೂಲಕ ಇತ್ಯರ್ಥಪಡಿಸಲಾಗಿದ್ದು, ಒಟ್ಟು 32226 ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಲಾಗಿದೆ.



3740 ಚಾಲ್ತಿ ಪ್ರಕರಣಗಳನ್ನು ಒಟ್ಟು ರೂ. 101770828, ಗಳಿಗೆ ಪರಿಹಾರ ಒದಗಿಸುವುದರ ಮೂಲಕ ಇತ್ಯರ್ಥಪಡಿಸಲಾಗಿದೆ. ವ್ಯಾಜ್ಯಪೂರ್ವ ಪ್ರಕರಣಗಳಿಗೆ ಸಂಬಂಧಿಸಿದಂತೆ 149 ವಿವಿಧ ಬ್ಯಾಂಕ್ ಪ್ರಕರಣಗಳು, 18 ಕಂದಾಯ ಅದಾಲತ್ ಪ್ರಕರಣಗಳು ಸೇರಿದಂತೆ ಒಟ್ಟು 28486 ವ್ಯಾಜ್ಯಪೂರ್ವ ಪ್ರಕರಣಗಳು ರೂ.35217499ಗಳಿಗೆ ರಾಜೀ ಸಂಧಾನವಾಗಿದೆ.

ಈ ಲೋಕ ಅದಾಲತ್ ಕಾರ್ಯಕ್ರಮದಲ್ಲಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ನಾಗವೇಣಿ, ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾಧ ಗಂಗಾಧರ ಸಿ.ಎಂ, ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು ವ ಸಿಜೆಎಂ ಜಿ.ಆರ್. ಶೆಟ್ಟರ, ಜೆಎಂಎಫ್‌ಸಿ 1ನೇ ನ್ಯಾಯಾಲಯದ ದಿವಾಣಿ ನ್ಯಾಯಾಧೀಶರಾದ ಶಿಲ್ಪಾ ತಿಮ್ಮಾಪುರ, ಜೆಎಂಎಫ್‌ಸಿ 2ನೇ ನ್ಯಾಯಾಲಯದ ದಿವಾಣಿ ನ್ಯಾಯಾಧೀಶರಾದ ಬೀರಪ್ಪ ಕಾಂಬಳೆ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಆರ್.ಜಿ. ಕಲ್ಲೂರ, ಉಪಾಧ್ಯಕ್ಷ ಎಂ.ಎ. ಸಂಗನಾಳ ಹಾಗೂ ಪದಾಧಿಕಾರಿಗಳು, ಸರ್ಕಾರಿ ಅಭಿಯೋಜಕರಾದ ಸವಿತಾ ಎಂ.ಶಿಗ್ಲಿ, ಜಿಲ್ಲಾ ಸರ್ಕಾರಿ ವಕೀಲರಾದ ಎಂ.ಎಂ. ಕುಕನೂರ, ಅಪರ ಜಿಲ್ಲಾ ಸರ್ಕಾರಿ ವಕೀಲರಾದ ಜಿ.ಬಿ. ನೀಲರಡ್ಡಿ ಹಾಗೂ ವಕೀಲ ವೃಂದದವರು, ಸಂಧಾನಕಾರ ವಕೀಲರು, ಪಕ್ಷಗಾರರು ಹಾಗೂ ಎಲ್ಲಾ ನ್ಯಾಯಾಲಯಗಳ ಸಿಬ್ಬಂದಿವರ್ಗ ಉಪಸ್ಥಿತರಿದ್ದು ಲೋಕ ಅದಾಲತ್ ಯಶಸ್ವಿಗೊಳಿಸಿದರು.

ಎಲ್ಲಾ ತಾಲೂಕಗಳ ನ್ಯಾಯಾಧೀಶರು ಹಾಗೂ ವಕೀಲ ವೃಂದದವರು, ಸಿಬ್ಬಂದಿವರ್ಗ, ಅಭಿಯೋಜನಾ ಇಲಾಖೆ, ಪೊಲೀಸ್ ಇಲಾಖೆ, ಅಬಕಾರಿ ಇಲಾಖೆ, ಗಣಿ ಮತ್ತು ಭೂ ಇಲಾಖೆ, ಕಾರ್ಮಿಕ ಇಲಾಖೆ, ಕಂದಾಯ ಇಲಾಖೆ ಅಧಿಕಾರಿಗಳು ಆಯಾ ತಾಲೂಕಾ ನ್ಯಾಯಾಲಯಗಳಲ್ಲಿ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ರಾಜೀ ಸಂಧಾನ ಯಶಸ್ವಿಗೊಳಿಸಿದರು.

ಅದಾಲತ್‌ಗೆ ಸಹಕಾರ ನೀಡಿದ ವಕೀಲ ವೃಂದದವರಿಗೆ, ಪಕ್ಷಗಾರರಿಗೆ, ಜಿಲ್ಲೆಯ ಎಲ್ಲಾ ನ್ಯಾಯಾಧೀಶರಿಗೆ, ಸಿಬ್ಬಂದಿ ವರ್ಗದವರಿಗೆ, ಜಿಲ್ಲಾ ನ್ಯಾಯಾಲಯದ ತಾಂತ್ರಿಕ ಸಿಬ್ಬಂದಿ ವರ್ಗದವರಿಗೆ, ಜಿಲ್ಲಾಡಳಿತ, ಪೊಲೀಸ್ ಇಲಾಖೆ, ಕಂದಾಯ ಇಲಾಖೆ, ಜಿಲ್ಲಾ ಸರ್ಕಾರಿ ವಕೀಲರಿಗೆ, ಅಪರ ಜಿಲ್ಲಾ ಸರ್ಕಾರಿ ವಕೀಲರಿಗೆ, ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರುಗಳಿಗೆ, ಅಭಿಯೋಜನಾ ಇಲಾಖೆ, ಕಾರ್ಮಿಕ ಇಲಾಖೆ, ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಗಳಿಗೆ, ವಿಮೆ ಕಂಪನಿಯವರಿಗೆ, ಉಪವಿಭಾಗಾಧಿಕಾರಿಗಳಿಗೆ, ನಗರಸಭೆ, ನಗರಯೋಜನಾ ಕೋಶ, ಬಿಎಸ್‌ಎನ್‌ಎಲ್, ಅಬಕಾರಿ ಇಲಾಖೆ, ಬ್ಯಾಂಕ್, ವಾರ್ತಾ ಇಲಾಖೆಯವರಿಗೆ ಹಾಗೂ ಎಲ್ಲಾ ಮಾಧ್ಯಮದವರಿಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಅವರು ಧನ್ಯವಾದಗಳನ್ನು ಅರ್ಪಿಸಿದ್ದಾರೆ.

> ಗದುಗಿನ 1ನೇ ಹೆಚ್ಚುವರಿ ಕೌಟುಂಬಿಕ ನ್ಯಾಯಾಲಯದ 1 ಪ್ರಕರಣದಲ್ಲಿ ದಂಪತಿಗಳನ್ನು ಪುನಃ ಒಂದುಗೂಡಿಸಿ ಹಾರ ಬದಲಾಯಿಸಿ ಕಳುಹಿಸಿಕೊಡಲಾಯಿತು. ಪ್ರಧಾನ ಹಿರಿಯ ದಿವಣಿ ನ್ಯಾಯಾಲಯ & ಸಿಜೆಎಂ 2, ಲಕ್ಷ್ಮೇಶ್ವರದಲ್ಲಿ 1 ಜೋಡಿ ದಂಪತಿಗಳನ್ನು ಪುನಃ ಒಂದುಗೂಡಿಸಿ ಕಳುಹಿಸಿಕೊಡಲಾಯಿತು. ಒಟ್ಟು 4 ಜೋಡಿಗಳು ಈ ರಾಷ್ಟ್ರೀಯ ಲೋಕ ಅದಾಲತದಲ್ಲಿ ಪುನಃ ಒಂದುಗೂಡಿದ್ದು ವಿಶೇಷವಾಗಿದೆ.


**ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ರೋಣ**

**ಮುಖ್ಯ ಕಛೇರಿ ಹೊಳೆಆಲೂರ – 582203, ತಾಲ್ಲೂಕ–ರೋಣ, ಜಿಲ್ಲಾ–ಗದಗ**

ಇ-ಮೇಲ್ : apmchlr@gmail.com ದೂರವಾಣಿ : 08381-266508 ಫ್ಯಾಕ್ಸ್ : (08381) 266041

ಸಂ;ಕೃಮಾಇ/ಕೃಉಮಾಸ/ಹೊಆ/ಅಭಿಕೆ/ಟೆಂಡರ್/ 170 /2025-26 ದಿನಾಂಕ : 09-09-2025

**ಸಂಕ್ಷಿಪ್ತ ಇ-ಟೆಂಡರ್ ಪ್ರಕಟಣೆ**

ಹೊಳೆಆಲೂರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ವತಿಯಿಂದ 2025-26 ಸಾಲಿನ ವಾರ್ಷಿಕ ಕ್ರಿಯಾ ಯೋಜನೆಯಡಿಯಲ್ಲಿ ಮಂಜೂರಾದ ಈ ಕೆಳಕಂಡ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕಾರ್ಯಗತಗೊಳಿಸಲು ಕರ್ನಾಟಕ ಸರ್ಕಾರದ ಲೋಕೋಪಯೋಗಿ ಮತ್ತು ಒಳನಾಡು ಜಲಸಾರಿಗೆ ಇಲಾಖೆಯಲ್ಲಿ ನೋಂದಾಯಿತ ಅರ್ಹ ಗುತ್ತಿಗೆದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯ ಪಾರದರ್ಶಕ ಅಧಿನಿಯಮ 1999 ನಿಯಮಗಳು 2020 ರ ಸ್ಟ್ಯಾಂಡರ್ಡ್ ಟೆಂಡರ್ ಡಾಕ್ಯೂಮೆಂಟ್ ನಿಯಮದನ್ವಯ ಐಟಂವಾರು ಟೆಂಡರುಗಳನ್ನು KPPP Portal ಮೂಲಕ ದ್ವಿ ಲಕೋಟೆ ಪದ್ಧತಿಯಲ್ಲಿ ಪ್ರತ್ಯೇಕವಾಗಿ ಆಹ್ವಾನಿಸಲಾಗಿದೆ. ಹೆಚ್ಚಿನ ವಿವರಗಳನ್ನು ಸಮಿತಿ ಕಾರ್ಯಾಲಯದ ದೂ. ಸಂ : **08381-266041** ಗೆ ಮಾಹಿತಿಗಾಗಿ ಸಂಪರ್ಕಿಸಬಹುದು.

| ಕ್ರ. ಸಂ | ಕಾಮಗಾರಿಗಳ ವಿವರ | ಟೆಂಡರ್‌ಗಿಟ್ಟ ಮೊತ್ತ (ರೂ.ಗಳಲ್ಲಿ) ಜಿ.ಎಸ್.ಟಿ ಹೊರತುಪಡಿಸಿ | ಷರಾ |
|---|---|---|---|
| 1 | APMC/2025-26/BD/ WORK_INDENT658 | **28.50** Lakhs | ಸಾಮಾನ್ಯ (4 ನೇ ದರ್ಜೆ & ಮೇಲ್ಪಟ್ಟ) |
| 2 | APMC/2025-26/BD/ WORK_INDENT659 | **14.25** Lakhs | ಸಾಮಾನ್ಯ (4 ನೇ ದರ್ಜೆ & ಮೇಲ್ಪಟ್ಟ) |
| 3 | APMC/2025-26/RD/ WORK_INDENT660 | **21.60** Lakhs | ಸಾಮಾನ್ಯ (4 ನೇ ದರ್ಜೆ & ಮೇಲ್ಪಟ್ಟ) |

**ವೇಳಾ ಪಟ್ಟಿ** (1) ಹೆಚ್ಚಿನ ವಿಚಾರಣೆಗಾಗಿ ಸಂಪರ್ಕಿಸುವ ಕೊನೆಯ ದಿನಾಂಕ : **07-10-2025** (2) ಭರ್ತಿ ಮಾಡಿದ ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ : **08-10-2025** ಸಂಜೆ 4.00 ಗಂಟೆಗೆ (3) ತಾಂತ್ರಿಕ ಬಿಡ್ ತೆರೆಯುವ ದಿನಾಂಕ : **13-10-2025** ಸಂಜೆ 4.30 ಗಂಟೆಗೆ (4) ಆರ್ಥಿಕ ಬಿಡ್ ತೆರೆಯುವ ದಿನಾಂಕ : **23-10-2025** ಸಂಜೆ 4.00 ಗಂಟೆಗೆ

ಸಹಿ/- ಕಾರ್ಯದರ್ಶಿ, ಕೃ.ಉ.ಮಾ.ಸ. ಹೊಳೆಆಲೂರ

ವಾಸಾಸಂಇ/ಗದಗ/ಕೆಎಸ್‌ಎಂಸಿಎ/292/2025-26

ಸಹಿ/- ಆಡಳಿತಾಧಿಕಾರಿಗಳು, ಕೃ.ಉ.ಮಾ.ಸ. ಹೊಳೆಆಲೂರ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka